ವಿಜಯಪುರ | ಸಂಪುಟ 04 | ಸಂಚಿಕೆ 171 | ಪುಟ 04 | ₹ 3.00

https://udayarashminews.com

udayarashmi 90088 88340

ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಶನಿವಾರ, ಆಗಸ್ಟ್, 29, 2026

"ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಪರಿಶಿಷ್ಟ ವರ್ಗಕ್ಕೆ ಸೇರಿದ 187 ಕೋಟಿ ರೂ. ಹಣವನ್ನು ಲೂಟಿ ಮಾಡಿದ ಬಿ.ನಾಗೇಂದ್ರ ಅವರನ್ನು ರಕ್ಷಿಸಲು ವಿಧಾನಮಂಡಲ ಅಧಿವೇಶನವನ್ನೇ ರದ್ದು ಮಾಡಿದ ಕಾಂಗ್ರೆಸ್ ಸರ್ಕಾರ, ಕೊನೆಗೂ ನಮ್ಮ ಹೋರಾಟಕ್ಕೆ ಮಣಿದು ರಾಜೀನಾಮೆ ಪಡೆದಿದೆ."

■ ಆರ್. ಅಶೋಕ್
ವಿಧಾನಸಭೆ ಪ್ರತಿಪಕ್ಷ ನಾಯಕರು

ಇಂಡಿ ತಾಲೂಕು ಬರಗಾಲ ಪೀಡಿತವೆಂದು ಘೋಷಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು. ಇಲ್ಲವಾದಲ್ಲಿ ಆಗಸ್ಟ 31 ಸೋಮವಾರದಿಂದ ನಗರದ ಆಡಳಿತ ಸೌಧ ಎದುರು ಬಿಜೆಪಿ ಯುವ ಮೋರ್ಚಾ ನೇತೃತ್ವದಲ್ಲಿ ರೈತರನ್ನು ಸೇರಿಸಿ ಧರಣಿ ನಡೆಸಲಾಗುವುದು ಎಂದು ಬಿಜೆಪಿ ಮಂಡಲ ಅಧ್ಯಕ್ಷ ಹಣಮಂತ್ರಾಯಗೌಡ ಪಾಟೀಲ ಎಚ್ಚರಿಸಿದರು.

ತಾಲೂಕಿನಾದ್ಯಂತ ಭೀಕರ ಪರಿಸ್ಥಿತಿ ಇದ್ದರೂ ಸರ್ಕಾರ ಇಂಡಿ ತಾಲೂಕನ್ನು ಬರಗಾಲದ ಪಟ್ಟಿಗೆ ಸೇರಿಸದಿರುವುದು ದುರ್ದೈವ.

ಸರ್ಕಾರ ತನ್ನ ನಿರ್ಧಾರವನ್ನು ಮರುಪರಿಶೀಲಿಸಿ ಇಂಡಿ ತಾಲೂಕನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು. ಸ್ಥಳೀಯ ಶಾಸಕ ಯಶವಂತ್ರಾಯಗೌಡರು ಸಂಕಷ್ಟದಲ್ಲಿರುವ ರೈತರಿಗೆ ಸೂಕ್ತ ಪರಿಹಾರ ವಿತರಿಸಲು ಕ್ರಮವಹಿಸಬೇಕು ಎಂದು ಬಿಜೆಪಿ ಮುಖಂಡರು ಬಲವಾಗಿ ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ಸಿದ್ದಲಿಂಗ ಹಂಜಗಿ, ಅನಿಲ ಜಮಾದಾರ, ಮಲ್ಲಿಕಾರ್ಜುನ ಕಿವುಡೆ, ಶೀಲವಂತ ಉಮರಾಣಿ, ದೇವೇಂದ್ರ ಕುಂಬಾರ, ರೈತ ಮೋರ್ಚಾ ಉಪಾಧ್ಯಕ್ಷ, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಈರಣ್ಣಗೌಡ ಪಾಟೀಲ, ಜೆಟ್ಟು ಮರಡಿ, ನಾಗೇಶ ಹೆಗಡ್ಯಾಳ, ರಮೇಶ ಧರೇನವರ, ಮಹೇಶ ಹೂಗಾರ, ಸೇರಿದಂತೆ ಇನ್ನಿತರ ಪ್ರಮುಖರು ಉಪಸ್ಥಿತರಿದ್ದರು.

ಸಚಿವ ಸ್ಥಾನಕ್ಕೆ ಬಿ. ನಾಗೇಂದ್ರ ರಾಜೀನಾಮೆ!

ಡಿಕೆಶಿ ಸರ್ಕಾರದ ಮೊದಲ ವಿಕೆಟ್ ಪತನ | ಕಣ್ಣೀರಿಡುತ್ತಲೇ ರಾಜೀನಾಮೆ ಘೋಷಿಸಿದ ನಾಗೇಂದ್ರ | ಬಿಜೆಪಿ ಹೋರಾಟಕ್ಕೆ ಸಂದ ಜಯ!

ಬೆಂಗಳೂರು: ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಕೋಟ್ಯಂತರ ರೂಪಾಯಿ ದುರುಪಯೋಗದ ಆರೋಪ ಎದುರಿಸುತ್ತಿರುವ ಸಚಿವ ಬಿ. ನಾಗೇಂದ್ರ ಅವರು ಶುಕ್ರವಾರ ಸಂಜೆ ಕೊನೆಗೂ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇದರೊಂದಿಗೆ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಸದನದ ಒಳಗೆ ಮತ್ತು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಪ್ರತಿಭಟನೆ ನಡೆಸಿದ್ದ ಬಿಜೆಪಿ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ.

ಶುಕ್ರವಾರ ಮಧ್ಯಾಹ್ನ ದೆಹಲಿಯಿಂದ ಆಗಮಿಸಿದ ಬಳಿಕ ಸಂಜೆ ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ನಾಗೇಂದ್ರ, ಮನುವಾದಿಗಳ ಕುತಂತ್ರದಿಂದ ನಾನು ಮೂರು ತಿಂಗಳು ಜೈಲಿಗೆ ಹೋಗಿದ್ದೆ ಎಂದು ಬಿಜೆಪಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಪ್ರತಿಪಕ್ಷ ಬಿಜೆಪಿ ಸದನ ನಡೆಯೋಕೆ ಬಿಡಲಿಲ್ಲ. ಸದನವನ್ನು ಹಾಳು ಮಾಡಿದರು. ಸಂವಿಧಾನ ವಿರೋಧಿ ಈಗಲೂ ಮನುಸ್ಮೃತಿ ಜಾರಿಗೆ ಪ್ರಯತ್ನಿಸುತ್ತಿವೆ. ಇದು ವೇದ ಕಾಲ ಅಲ್ಲ. ಪುರಾಣ ಕಾಲ ಅಲ್ಲ. ಸಂವಿಧಾನ ಕಾಲ, ಅಂಬೇಡ್ಕರ್ ಯುಗ ಇದು. ಉತ್ತರಕಾಂಡದಲ್ಲಿ ಶಂಭುಕ ಹತ್ಯೆಯಾಯ್ತು. ಇವತ್ತು ಶಂಭುಕ ಹತ್ಯೆ ಆಗಲ್ಲ. ರಕ್ಷಣೆಗೆ ಸಂವಿಧಾನ ಇದೆ. ಮನುಸ್ಮೃತಿಗಳು ಶಂಭುಕ ಹತ್ಯೆ ಮಾಡಿದ ರೀತಿ ಆಗಲ್ಲ. ದಲಿತರು, ಕ್ಷುದ್ರರು, ಆದಿವಾಸಿಗಳು, ಅಲ್ಪಸಂಖ್ಯಾತರು ಬದುಕಬಾರದು ಅನ್ನೋದು ಮನುಸ್ಮೃತಿ ಬಿಜೆಪಿ ಅವರ ಮನಸ್ಥಿತಿ. ಆದರೆ, ಸಂವಿಧಾನ ನಮ್ಮ ರಕ್ಷಣೆ ಮಾಡುತ್ತದೆ ಎಂದು ಬಿಜೆಪಿ ವಿರುದ್ಧ ಹರಿಹಾಯ್ದರು.

ದೆಹಲಿಗೆ ತೆರಳಿದ್ದ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ನಾಗೇಂದ್ರ ರಾಜೀನಾಮೆ ಸಂಬಂಧಿಸಿದಂತೆ ಪಕ್ಷದ ವರಿಷ್ಠರ ಜೊತೆ ಮಹತ್ವದ ಸಮಾಲೋಚನೆ ನಡೆಸಿದ್ದರು. ಅಲ್ಲದೆ ಪಕ್ಷ ಹಾಗೂ ಸರ್ಕಾರದ ಹಿತದೃಷ್ಟಿಯಿಂದ ನಾಗೇಂದ್ರ ಅವರು ರಾಜೀನಾಮೆ ನೀಡುವುದೇ ಸೂಕ್ತ ಎಂಬ ಸಂದೇಶವನ್ನು ನೀಡಿದ್ದರು ಎನ್ನಲಾಗಿದೆ.

ಒಂದೇ ಹಗರಣಕ್ಕೆ ಎರಡು ಬಾರಿ ರಾಜೀನಾಮೆ!

ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಚಿವ ಸಂಪುಟದಲ್ಲಿ ಸಚಿವರಾಗಿದ್ದ ಬಿ ನಾಗೇಂದ್ರ ಅವರು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಗರಣ ಸಂಬಂಧ ಜೂನ್ 6, 2024ರಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಬಳಿಕ ಸಿಎಂ ಡಿಕೆ ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಮತ್ತೆ ಸಚಿವರಾಗಿ ಆಗಸ್ಟ್ 3, 2026ರಂದು ಪ್ರಮಾಣವಚನ ಸ್ವೀಕರಿಸಿದ್ದರು. ಆದರೆ ಇದಕ್ಕೆ ಪ್ರತಿಪಕ್ಷಗಳು ತೀವ್ರ ವಿರೋಧ ವ್ಯಕ್ತಪಡಿಸಿದ್ದವು ಮತ್ತು ನಾಗೇಂದ್ರ ರಾಜೀನಾಮೆ ಪಟ್ಟು ಹಿಡಿದಿದ್ದವು. ಹೀಗಾಗಿ ನಾಗೇಂದ್ರ ಅವರು ಇಂದು ರಾಜೀನಾಮೆ ನೀಡಿದ್ದಾರೆ. ಆ ಮೂಲಕ ಒಂದೇ ಹಗರಣ ಸಂಬಂಧ ಎರಡು ಬಾರಿ ಸಚಿವ ಸ್ಥಾನ ಕಳೆದುಕೊಂಡಂತಾಗಿದೆ.

ಕರ್ತವ್ಯದ ಜೊತೆ ಬಾಂಧವ್ಯಕ್ಕೂ ಬೆಲೆ: ಸಿಬ್ಬಂದಿಗೆ ರಾಖಿ ಕಟ್ಟಿದ ಅಧಿಕಾರಿ

■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ರಕ್ಷಾ ಬಂಧನ ಹಬ್ಬದ ಅಂಗವಾಗಿ ತಾಲ್ಲೂಕಿನ ತೊರವಿ ಗ್ರಾಮ ಪಂಚಾಯಿತಿಯಲ್ಲಿ ಶುಕ್ರವಾರ ವಿಶೇಷವಾಗಿ ರಕ್ಷಾ ಬಂಧನ ಕಾರ್ಯಕ್ರಮವನ್ನು ಆಚರಿಸಲಾಯಿತು.

ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ರಾಜಶ್ರೀ ತುಂಗಳ ಹಾಗೂ ಸಿಬ್ಬಂದಿ ಲಕ್ಷ್ಮಿ ಮಹಲ ಅವರು ಗ್ರಾಮ ಪಂಚಾಯತಿಯ ಎಲ್ಲ ಸಿಬ್ಬಂದಿಗೆ ರಾಖಿ ಕಟ್ಟುವ ಮೂಲಕ ಸಹೋದರತ್ವ, ಪ್ರೀತಿ, ವಿಶ್ವಾಸ ಹಾಗೂ ಪರಸ್ಪರ ಸಹಕಾರದ ಭಾವನೆಯನ್ನು ಬೆಳೆಸಿದರು.

ರಕ್ಷಾ ಬಂಧನವು ಸಹೋದರ ಸಹೋದರಿಯರ ನಡುವಿನ ಪ್ರೀತಿ, ಬಾಂಧವ್ಯ ಹಾಗೂ ರಕ್ಷಣೆಯ ಸಂಕೇತವಾಗಿರುವುದರ ಜೊತೆಗೆ, ಸಮಾಜದಲ್ಲಿ ಪರಸ್ಪರ ಗೌರವ ಮತ್ತು ಮಾನವೀಯ ಸಂಬಂಧಗಳನ್ನು ಗಟ್ಟಿಗೊಳಿಸುವ ಸಂದೇಶವನ್ನು ನೀಡುತ್ತದೆ. ಈ ಹಿನ್ನೆಲೆಯಲ್ಲಿ ಪಿಡಿಒ ರಾಜಶ್ರೀ ತುಂಗಳ ಅವರು ಪಂಚಾಯಿತಿ ಸಿಬ್ಬಂದಿಗೆ ರಾಖಿ ಕಟ್ಟುವ ಮೂಲಕ ಕಚೇರಿಯಲ್ಲಿಯೂ ಕುಟುಂಬದಂತಹ ಆತ್ಮೀಯ ವಾತಾವರಣ ನಿರ್ಮಿಸುವ ಪ್ರಯತ್ನ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ಕಾರಿ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುವ ಪ್ರತಿಯೊಬ್ಬರೂ ಒಂದು ಕುಟುಂಬದ ಸದಸ್ಯರಂತೆ ಪರಸ್ಪರ ಸಹಕಾರದಿಂದ ಕೆಲಸ ಮಾಡಿದಾಗ ಮಾತ್ರ ಸಾರ್ವಜನಿಕರಿಗೆ ಉತ್ತಮ ಸೇವೆ ನೀಡಲು ಸಾಧ್ಯ. ಹಬ್ಬಗಳು ನಮ್ಮಲ್ಲಿ ಪ್ರೀತಿ, ವಿಶ್ವಾಸ ಮತ್ತು ಸಹೋದರತ್ವದ ಭಾವನೆ ಮೂಡಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿಯ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

ವಿಜಯಪುರ ಜಿಲ್ಲೆಯಲ್ಲಿ ಎಸ್‌ಐಆರ್ ಹೆಸರಿನಲ್ಲಿ 2.97 ಲಕ್ಷ ಮತದಾರರು ಪಟ್ಟಿಯಿಂದ ಹೊರಗೆ | ಮತ ಕಾವಲು ಸಮಿತಿ ಆಕ್ಷೇಪ

ಎಸ್‌ಐಆರ್: ಅರ್ಹ ಮತದಾರರ ಹಕ್ಕು ರಕ್ಷಣೆಗೆ ಮತ ಕಾವಲು ಸಮಿತಿ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯ ಮತದಾರರ ಪಟ್ಟಿಯಲ್ಲಿ ಸಂಭವಿಸಿರುವ ಭಾರೀ ಬದಲಾವಣೆಗಳ ಕುರಿತು ಜಿಲ್ಲೆಯ ಖಖಖ ಹೋರಾಟ ಸಮಿತಿ ಹಾಗೂ ಮತ ಕಾವಲು ಸಮಿತಿ ತೀವ್ರ ಆತಂಕ ಮತ್ತು ಆಕ್ಷೇಪ ವ್ಯಕ್ತಪಡಿಸಿದೆ.

ಈ ಕುರಿತು ನಗರದಲ್ಲಿ ಜಂಟಿ ಸುದ್ದಿಗೋಷ್ಠಿ ನಡೆಸಿದ ಮುಖಂಡರಾದ ಭೋಗೇಶ ಸೊಲಾಪೂರ, ಮೊಹಮ್ಮದ್ ಖದೀರ್, ಲಕ್ಷ್ಮಣ್ ಹಂದ್ರಾಳ, ಡಾ. ಗುರಿಕರ ಅವರು ಮಾತನಾಡಿ, ಮತದಾರರ ಪಟ್ಟಿಯನ್ನು ಶುದ್ಧೀಕರಿಸುವುದು ಅಗತ್ಯವಾದರೂ, ಆ ಪ್ರಕ್ರಿಯೆಯಲ್ಲಿ ಒಬ್ಬನೇ ಒಬ್ಬ ಅರ್ಹ ಮತದಾರನ ಮತದಾನದ ಹಕ್ಕು ಕಳೆದುಹೋಗಬಾರದು ಎಂಬುದು ಮತ ಕಾವಲು ಸಮಿತಿಯ ಸ್ಪಷ್ಟ ನಿಲುವಾಗಿದೆ. ವಿಜಯಪುರ ಜಿಲ್ಲೆಯಲ್ಲಿ ಖಖಖ ಪ್ರಕ್ರಿಯೆಯ ಮೊದಲ ಹಂತದಲ್ಲಿ ಒಟ್ಟು 19,82,114 ಮತದಾರರಿಗೆ ಎನ್ಯೂಮರೇಷನ್ ಫಾರಂಗಳನ್ನು ವಿತರಿಸಲಾಗಿತ್ತು. ಈ ಪೈಕಿ 16,84,968 ಫಾರಂಗಳು ಡಿಜಿಟಲೀಕರಣಗೊಂಡಿದ್ದು, ಒಟ್ಟು 2,97,147 ಮತದಾರರು ವಿವಿಧ ಕಾರಣಗಳಿಂದ ಕರಡು ಪಟ್ಟಿಯಿಂದ ಹೊರಗುಳಿದಿದ್ದಾರೆ.

ಇವರಲ್ಲಿ 1,52,169 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡವರು, 59,093 ಗೈರು ಮತ್ತು 30,692 ಮತದಾರರು ಡುಪ್ಲಿಕೇಟ್ ಎಂದು ಗುರುತಿಸಲಾಗಿದೆ. ಇದು ಕೇವಲ ಅಂಕಿ-ಅಂಶವಲ್ಲ. ಇದರ ಹಿಂದೆ ವಿಜಯಪುರ ಜಿಲ್ಲೆಯ ಸಾವಿರಾರು ಕುಟುಂಬಗಳ ಮತದಾನದ ಹಕ್ಕು ಅಡಗಿದೆ. ವಿಜಯಪುರ ನಗರ ಕ್ಷೇತ್ರದಲ್ಲಿ 79,737 ಮತದಾರರು ಪಟ್ಟಿಯಿಂದ ಹೊರಗುಳಿದಿರುವ ಹಿನ್ನೆಲೆಯಲ್ಲಿ ಚುನಾವಣಾ ಆಯೋಗವು ಈ ಬಗ್ಗೆ ಸಂಪೂರ್ಣ ಪಾರದರ್ಶಕತೆ ಮತ್ತು ಸ್ಪಷ್ಟತೆ ನೀಡಬೇಕು. ಅರ್ಹ ಮತದಾರರ ಹೆಸರುಗಳನ್ನು ವೈಯಕ್ತಿಕ ಪರಿಶೀಲನೆ ಹಾಗೂ ಸಮರ್ಪಕ ಅವಕಾಶವಿಲ್ಲದೆ ಕೈಬಿಡಬಾರದು. ಒಬ್ಬನೇ ಒಬ್ಬ ಅರ್ಹ ಮತದಾರನ ಮತದಾನದ ಹಕ್ಕು ಕಳೆದುಹೋಗದಂತೆ ಮತ ಕಾವಲು ಸಮಿತಿ ವತಿಯಿಂದ ಕಾನೂನುಬದ್ಧ ಮತ್ತು ಪ್ರಜಾಸತ್ತಾತ್ಮಕ ಹೋರಾಟವನ್ನು ಮುಂದುವರಿಸಲಾಗುವುದು" ಎಂದು ಹೇಳಿದರು.

ಅರ್ಹ ಮತದಾರರ ಹಕ್ಕುಗಳನ್ನು ರಕ್ಷಿಸುವವರೆಗೆ ಮತ ಕಾವಲು ಸಮಿತಿ ತನ್ನ ಪ್ರಜಾಸತ್ತಾತ್ಮಕ ಮತ್ತು ಕಾನೂನುಬದ್ಧ ಹೋರಾಟವನ್ನು ಮುಂದುವರಿಸಲಿದೆ ಎಂದಿದ್ದಾರೆ.

ಈ ಸಂದರ್ಭದಲ್ಲಿ ಮತ ಕಾವಲು ಸಮಿತಿಯ ಸದಸ್ಯರಾದ ಅಕ್ರಮ ಮಾಶಾಲ್ಕರ್, ಫಯಾಜ್ ಕಲಾದಗಿ, ನೀಲಂಬಿಕಾ ಬಿರಾದಾರ್, ಶ್ರೀನಾಥ್ ಪೂಜಾರಿ ಉಪಸ್ಥಿತರಿದ್ದರು.

ವಿಜಯಪುರ ಜಿಲ್ಲೆಯಲ್ಲಿ ಎಸ್‌ಐಆರ್ ಹೆಸರಿನಲ್ಲಿ 2.97 ಲಕ್ಷ ಮತದಾರರು ಪಟ್ಟಿಯಿಂದ ಹೊರಗೆ | ಮತ ಕಾವಲು ಸಮಿತಿ ಆಕ್ಷೇಪ

ಆರೋಪಿಗಳ ವಿರುದ್ಧ ಕಾನೂನು ಕ್ರಮಕ್ಕೆ ಆಗ್ರಹಿಸಿ ಚಡಚಣ ಕಾನಿಪ ಸಂಘ ಹಾಗೂ ರೈತ ಸಂಘದಿಂದ ಗೃಹ ಸಚಿವರಿಗೆ ಮನವಿ

ಪತ್ರಕರ್ತಗೆ ಜೀವ ಬೆದರಿಕೆ ಹಾಕಿದ ದುಷ್ಕರ್ಮಿಗಳಿಗೆ ಕಠಿಣ ಶಿಕ್ಷೆಯಾಗಲಿ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ವಿಜಯಪುರ ಜಿಲ್ಲೆಯಲ್ಲಿ ಸರ್ಕಾರದ ಅನ್ನಭಾಗ್ಯ ಯೋಜನೆಯ ಅಕ್ಕಿಯ ಕಾಳಸಂತೆ ಹಾಗೂ ಅಕ್ರಮ ದಂಧೆ ಕುರಿತು ವರದಿ ಪ್ರಕಟಿಸಿದ ಹೊಸದಿಗಂತ ಪತ್ರಿಕೆಯ ಜಿಲ್ಲಾ ವರದಿಗಾರ ಪರಶುರಾಮ ಶಿವಶರಣ ಅವರ ಮನೆಗೆ ತೆರಳಿ ಜೀವ ಬೆದರಿಕೆ ಹಾಕಿದ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು ಪತ್ರಕರ್ತರಿಗೆ ಸೂಕ್ತ ರಕ್ಷಣೆ ನೀಡುವಂತೆ ಆಗ್ರಹಿಸಿ ಚಡಚಣ ತಹಶೀಲ್ದಾರ್ ಮೂಲಕ ಗೃಹ ಸಚಿವರಿಗೆ ಕರ್ನಾಟಕ ಕಾನಿಪ ಸಂಘ (ಚಡಚಣ) ಹಾಗೂ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಶುಕ್ರವಾರ ಮನವಿ ಸಲ್ಲಿಸಲಾಯಿತು. ಈ ವೇಳೆ ಮಾತನಾಡಿದ ಪ್ರಧಾನ ಕಾರ್ಯದರ್ಶಿ ರಾಜಶೇಖರ ಡೋಣಜಮಠ ಅವರು, ಅನ್ನಭಾಗ್ಯ ಯೋಜನೆಯ ಅಕ್ಕಿಯ ಅಕ್ರಮ ದಂಧೆ ಕುರಿತು ಪರಶುರಾಮ ಶಿವಶರಣ ಅವರು ಜವಾಬ್ದಾರಿಯುತವಾಗಿ ತನಿಖಾ ವರದಿ ಪ್ರಕಟಿಸಿದ್ದು ಇದರಿಂದ ಅಕ್ರಮದಲ್ಲಿ ಭಾಗಿಯಾದ ಕೆಲವರು ಪತ್ರಕರ್ತರ ಮನೆಗೆ ತೆರಳಿ ಜೀವ ಬೆದರಿಕೆ ಹಾಕಿದ್ದು ಅಕ್ಷಮ್ಯ ಅಪರಾಧವಾಗಿದ್ದು ಸಮಾಜಘಾತುಕರನ್ನು ಕೂಡಲೆ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದರು.

ರೈತ ಸಂಘದ ತಾಲೂಕು ಅಧ್ಯಕ್ಷ ವಸಂತ ಭೈರಾಮಡಿ, ಸಮಾಜದಲ್ಲಿನ ಅಕ್ರಮ, ಭ್ರಷ್ಟಾಚಾರ ಹಾಗೂ ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದ ವಿಷಯಗಳನ್ನು ಜನರ ಮುಂದಿಡುವುದು ಪತ್ರಕರ್ತರ ವೃತ್ತಿಪರ ಕರ್ತವ್ಯವಾಗಿದೆ. ಇಂತಹ ಕರ್ತವ್ಯ ನಿರ್ವಹಿಸಿದ್ದಕ್ಕಾಗಿ ಪತ್ರಕರ್ತರ ಮನೆಗೆ ತೆರಳಿ ಬೆದರಿಕೆ ಹಾಕುವುದು ಪತ್ರಿಕಾ ಸ್ವಾತಂತ್ರ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾದ ಕೃತ್ಯವಾಗಿದೆ. ಪತ್ರಕರ್ತರ ಸುರಕ್ಷತೆ ಹಾಗೂ ವೃತ್ತಿ ಸ್ವಾತಂತ್ರವನ್ನು ಕಾಪಾಡುವುದು ಸರ್ಕಾರ ಮತ್ತು ಪೊಲೀಸ್ ಇಲಾಖೆಯ ಜವಾಬ್ದಾರಿಯಾಗಿದ್ದು ಮತ್ತೆ ಇಂತಹ ಪ್ರಕರಣಗಳು ಮರುಕಳಿಸದಂತೆ ಸರ್ಕಾರ ಮತ್ತು ಪೋಲೀಸ್ ಇಲಾಖೆ ಕಠಿಣ ಕಾನೂನು ಜಾರಿಗೊಳಿಸಬೇಕು ಎಂದರು. ತಹಶೀಲ್ದಾರರ ಪರವಾಗಿ ಅಧಿಕಾರಿ ರವಿಕುಮಾರ ಎಸ್.ಚವ್ಹಾಣ ಮನವಿ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಚಡಚಣ ಕಾನಿಪ ಸಂಘದ ಅಧ್ಯಕ್ಷ ರಮೇಶ ಬಿರಾದಾರ, ಮಾಜಿ ಅಧ್ಯಕ್ಷ ಪ್ರಭಾಕರ ಗೂಳಿಪಾಟೀಲ, ಖಜಾಂಚಿ ವಿನಯ ಜೀರಂಕಲಗಿ, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಶಿವಾನಂದ ಶಿವಶರಣ, ಉಪಾಧ್ಯಕ್ಷ ಸಂಗಮೇಶ ಹೆಚ್ ಹೂಗಾರ, ಶಂಕರ ಹಾವಿನಾಳ, ಸುಬ್ರಹ್ಮಣ್ಯ ಸಂಗಮ, ಶ್ರೀಕಾಂತ ಬಗಲಿ, ಗಂಗಾಧರ ಗಿಡವೀರ, ಪುಟ್ಟು ನೀವರಗಿ, ಚಂದ್ರಕಾಂತ ನೀವರಗಿ, ಲಾಲಸಾಬ ನದಾಫ ಸೇರಿದಂತೆ ಪತ್ರಕರ್ತರು ಇದ್ದರು.

■ ಉದಯರಶ್ಮಿ ದಿನಪತ್ರಿಕೆ

ಮಕ್ಕಳ ಮನವೊಲಿಕೆ

ನಾವು - ನಮ್ಮವರು

(ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಕುರಿತು ಲೇಖನ ಮಾಲಿಕೆ)

ಇವತ್ತಿನ ಮಾಹಿತಿ ಯುಗದಲ್ಲಿ ನಮಗೆ ಬೇಕಾದ ಬೇಡವಾದ ಹತ್ತು ಹಲವು ವಿಷಯಗಳು ನಮಗೆ ಮಾಹಿತಿಯ ರೂಪದಲ್ಲಿ ಲಭ್ಯವಾಗುತ್ತದೆ. ಈ ಹಿಂದೆ ಯಾವುದೇ ಹೊಸ ವಿಷಯವನ್ನು ನಮಗೆ ಪಾಲಕರು ಕಲಿಸುತ್ತಿದ್ದರು, ಪುಸ್ತಕಗಳ ಮೂಲಕ ವಿಷಯದ ಅರಿವಾಗುತ್ತಿತ್ತು ನಿಜ ಆದರೆ ಪುಸ್ತಕಗಳ ಲಭ್ಯತೆಯು ಕೂಡ ಅಷ್ಟೇ ಕಠಿಣವಾಗಿದ್ದು ಪುಸ್ತಕಗಳ ಮೂಲಕ ಮಸ್ತಕದ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕು ಎಂಬ ಅರಿವು ಬಹಳಷ್ಟು ಜನರಿಗೆ ಇರಲಿಲ್ಲ.

ಮೊಬೈಲ್ ನಲ್ಲಿಯೇ ಜಗತ್ತನ್ನು ಕಾಣುತ್ತಿರುವ ಪ್ರಸ್ತುತ ದಿನಮಾನಗಳಲ್ಲಿ ಮಕ್ಕಳನ್ನು ಹೇಗೆ ಬೆಳೆಸುವುದು ಎಂಬ ಕುರಿತು ಪಾಲಕರಿಗೆ ಅರಿವು ಮೂಡಿಸಬೇಕಾಗಿದ್ದು ಮಕ್ಕಳ ನಡವಳಿಕೆಯನ್ನು ಬದಲಾಯಿಸುವ ನಿಟ್ಟಿನಲ್ಲಿ ಪಾಲಕರ ನಡವಳಿಕೆ ಹೇಗಿರಬೇಕು ಎಂಬುದು ಒಂದು ಸವಾಲಿನ, ಗೋಜಲಿನ ಸಂಗತಿಯೇ ಆಗಿದೆ.

ಕೆಲ ದಶಕಗಳ ಹಿಂದೆ ಮಕ್ಕಳ ಮೇಲೆ ಪ್ರಭಾವ ಬೀರುವವರಲ್ಲಿ

ಮೊದಲು ಪಾಲಕರು ನಂತರ ಶಿಕ್ಷಕರು ಮೂರನೆಯದಾಗಿ ಸ್ನೇಹಿತರು ಮತ್ತು ಕೊನೆಯದಾಗಿ ಮಾಧ್ಯಮಗಳು ಪ್ರಮುಖ ಪಾತ್ರ ವಹಿಸುತ್ತಿದ್ದವು. ಮನೆಯಲ್ಲಿ ಪಾಲಕರು ಹೇಳಿದ ಮಾತೇ ಮೊದಲ ಮತ್ತು ಕೊನೆಯ ಮಾತಾಗಿರುತ್ತಿತ್ತು. ಪಾಲಕರು ಸೂಚಿಸಿದಂತೆಯೇ ಶಿಕ್ಷಕರು ಮಕ್ಕಳನ್ನು ಕಟ್ಟುನಿಟ್ಟಿನ ಶಿಸ್ತಿಗೊಳ ಪಡಿಸುತ್ತಿದ್ದರು. ಸ್ನೇಹಿತರ ಪ್ರಭಾವ ಅಷ್ಟೇನು ಇರುತ್ತಿರಲಿಲ್ಲ. ಅಂತಿಮವಾಗಿ ಮಾಧ್ಯಮಗಳು ಮಕ್ಕಳ ಮೇಲೆ ಪ್ರಭಾವ ಬೀರುತ್ತಿದ್ದವು. ಆದರೆ ಇಂದು ಪರಿಸ್ಥಿತಿ ಸಂಪೂರ್ಣ ತಿರುವು ಮುರುವಾಗಿದ್ದು ಮಕ್ಕಳ ಮೇಲೆ ನಿಚ್ಚಳ ಪ್ರಭಾವವನ್ನು ಮಾಧ್ಯಮಗಳು ಬೀರುತ್ತಿದ್ದು ನಂತರದ ಸ್ಥಾನವನ್ನು ಕ್ರಮವಾಗಿ ಸ್ನೇಹಿತರು ಶಿಕ್ಷಕರು ಮತ್ತು ಕೊನೆಯ ಸ್ಥಾನವನ್ನು ಪಾಲಕರು ಪಡೆದುಕೊಂಡಿದ್ದಾರೆ ಎಂಬುದು ವಿಪರ್ಯಾಸದ ಸಂಗತಿ.

ಅಂದಿನ ಕೂಡು ಕುಟುಂಬಗಳಲ್ಲಿ ಮಕ್ಕಳು ಮನೆಯ ಎಲ್ಲಾ ಕೆಲಸ ಕಾರ್ಯಗಳನ್ನು ಮಾಡುತ್ತಿದ್ದರು. ಕುಟುಂಬದ ಎಲ್ಲಾ ಆಗು ಹೋಗುಗಳಲ್ಲಿ ಮಕ್ಕಳ ಪಾತ್ರ ಅಧಿಕವಾಗಿತ್ತು. ತಂದೆಯಾದವನು ತನ್ನ ಮಕ್ಕಳನ್ನು ಕಟ್ಟುನಿಟ್ಟಾಗಿ ದಂಡಿಸಿದಾಗ ಆ ಮಗುವನ್ನು ಕೂಡು ಕುಟುಂಬದ ಬೇರೊಬ್ಬ ಸದಸ್ಯ ಕರೆದೊಯ್ದು ರಮಿಸಿ ಊಟ ಮಾಡಿಸಿ ನಿಧಾನವಾಗಿ ಆತನ ತಪ್ಪನ್ನು ಆತನಿಗೆ ಮನದಟ್ಟು ಮಾಡಿಸಿ, ಆತನ ತಂದೆ ಆತನ ಒಳಿತಿಗಾಗಿಯೇ ಗದರಿಸಿದ್ದು ಎಂದು ತಿಳಿ ಹೇಳುತ್ತಿದ್ದರು.

ಆದರೆ ಇದೀಗ ವಿಭಕ್ತ ಕುಟುಂಬದಲ್ಲಿ ತಂದೆ ತಾಯಿ ಮತ್ತು ಒಂದು ಇಲ್ಲವೇ ಎರಡು ಮಕ್ಕಳು ಇದ್ದು, ಮಗುವನ್ನು ಪಾಲಕರು ಗದರಿಸಿದಾಗ ಆ ಮಗುವನ್ನು ರಮಿಸಿ ಅದರ ಮನವೊಲಿಸಿ ತಪ್ಪು ತಿದ್ದುವವರ್ಯಾರು? ಮಗು ಯಾರನ್ನು ಅವಲಂಬಿಸಬೇಕು ಎಂಬುದೇ ಯಕ್ಷ ಪ್ರಶ್ನೆಯಾಗಿದೆ?

ಪಾಲಕರಿಂದ ಬೈಸಿಕೊಂಡ ಮಗು ತನ್ನ ಕೋಣೆಯಲ್ಲಿ ಹೋಗಿ ಕುಳಿತಾಗ ಆತ ತನ್ನ ಪಾಲಕರು ತನ್ನನ್ನು ನಿರ್ಲಕ್ಷಿಸುತ್ತಿದ್ದಾರೆ, ಕಾಳಜಿ ಮಾಡುವುದಿಲ್ಲ, ಅವರಿಗೆ ತನ್ನ ಮೇಲೆ ಪ್ರೀತಿ ಇಲ್ಲ ಎಂದೆಲ್ಲ ಭಾವಿಸಿ ಅದೇ ನಿಜ ಎಂಬಂತೆ ನಂಬುತ್ತಾನೆ.

ಮಗು ತನ್ನ ಮನದ ಭಾವನೆಗಳನ್ನು ಹಂಚಿಕೊಳ್ಳಲು

ಯಾರಾದರೂ ಒಬ್ಬರು ಬೇಕಲ್ಲವೇ? ಯಾರೂ ಇಲ್ಲದೆ ಹೋದಾಗ ಮಗು ಮೊಬೈಲ್ನ ಮೊರೆ ಹೋಗುತ್ತದೆ. ಪಾಲಕರಿಗೆ ತನ್ನ ಅಸ್ತಿತ್ವದ ಗುರುತೇ ಇಲ್ಲ ಎಂದು ಭಾವಿಸುವ ಮಗುವಿನ ಅಸ್ತಿತ್ವವನ್ನು ಗುರುತಿಸುವ ಆಧುನಿಕ ತಂತ್ರಜ್ಞಾನದ ಪ್ರಭಾವಿ ಮಾಯಾ ಜಾಲವು ಮಗು ಬಯಸುವ ಎಲ್ಲವನ್ನೂ ತನ್ನಲ್ಲಿ ಆಡಗಿಸಿಕೊಂಡಿದ್ದು ಮಗುವಿನ ಎಲ್ಲ ಅವಶ್ಯಕತೆಗಳನ್ನು ಪೂರೈಸುವ ಮೂಲಕ ತನ್ನ ಕಪಿಮುಷ್ಟಿಯಲ್ಲಿ

ಇಟ್ಟುಕೊಂಡಿದೆ.

ಇಂದಿನ ಆಧುನಿಕ ಯುಗದಲ್ಲಿ ಏನನ್ನಾದರೂ ಸಾಧಿಸುವ, ಕುಟುಂಬಕ್ಕೆ ಹೆಚ್ಚಿನ ಆರ್ಥಿಕ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಕರು ವ್ಯಸ್ತರಾಗಿದ್ದು ಮಕ್ಕಳೆಡೆ ಗಮನ ಹರಿಸಲು ಅವರಿಗೂ ಸಾಧ್ಯವಾಗುತ್ತಿಲ್ಲ.

ಇತ್ತೀಚೆಗೆ ಅಟೆಂಶನ್ ಮ್ಯಾನೇಜರ್ ಎಂಬ ಹೊಸ ಹುದ್ದೆಯು ಸೃಷ್ಟಿಸಲ್ಪಟ್ಟಿದ್ದು, ಈ ನಿರ್ವಾಹಕನ ಕೆಲಸ ತನ್ನ ಗ್ರಾಹಕನ ಗಮನವನ್ನು ಅತ್ತಿತ್ತ ನೋಡದಂತೆ ಕೇವಲ ತನ್ನಲ್ಲಿ ಹಿಡಿದಿಟ್ಟುಕೊಳ್ಳುವುದು. ಈ ಹಿಂದೆ ಸಾಮಾಜಿಕ ಜಾಲತಾಣಗಳು ವಿವಿಧ ಫೋಟೋಗಳು, ವಿಡಿಯೋಗಳನ್ನು ಹೊಂದಿದ್ದು ಕ್ಲಿಕ್ ಮಾಡಿದೊಡನೆ ಆರಂಭವಾಗುತ್ತಿದ್ದ ಈ ವಿಡಿಯೋಗಳನ್ನು ಇದೀಗ ನಾವು ಅವುಗಳನ್ನು ವೀಕ್ಷಿಸಲು ನಮ್ಮ ಬೆರಳನ್ನು ಒತ್ತುವ ಮುನ್ನವೇ ಸ್ವಯಂಚಾಲಿತವಾಗಿ

ಪ್ರಸಾರವಾಗುತ್ತವೆ. ವ್ಯಕ್ತಿಯು ತನ್ನೆಲ್ಲ ಕೆಲಸ ಕಾರ್ಯಗಳನ್ನು ಹಿಂದಿಟ್ಟು ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ತನ್ನನ್ನು ತಾನು ತೊಡಗಿಸಿಕೊಳ್ಳಲು ಕಾರಣ ನಾವು ಅವುಗಳ ಆಕರ್ಷಣೆಯಲ್ಲಿ ಸಿಲುಕಿಕೊಂಡಿರುವುದು.

ಸಾಮಾಜಿಕ ಜಾಲತಾಣಗಳು ವೈಜ್ಞಾನಿಕವಾಗಿ ಸಂಪೂರ್ಣವಾಗಿ ಮಕ್ಕಳ ಗಮನವನ್ನು ತಮ್ಮಲ್ಲಿ ಕೇಂದ್ರೀಕರಿಸಿಕೊಂಡಿವೆ. ಇಡೀ ದಿನ ಶಾಲೆಯಲ್ಲಿ ಕಳೆಯುವ ಮಕ್ಕಳು ತಮ್ಮೆಲ್ಲ ಅನುಭವಗಳನ್ನು ಹಂಚಿಕೊಳ್ಳಲು ಅತ್ಯುತ್ಸಾಹದಿಂದ ಮನೆಗೆ

ಬಂದಾಗ ಪಾಲಕರು ಆ ಮಕ್ಕಳನ್ನು ಕುರಿತು ಕೈಕಾಲು ಮುಖ ತೊಳೆ, ತಿಂಡಿ ತಿಂದು ಹಾಲು ಕುಡಿ, ಶಾಲೆಯ ಹೋಂವರ್ಕ್ ಮಾಡು ಎಂದು ಕಟುವಾಗಿ ಹೇಳುತ್ತಾರೆ. ಇದು ಮಕ್ಕಳ ಉತ್ಸಾಹ ಜರ್ಜನೇ ಜರಿದು ಹೋಗಲು ಕಾರಣವಾಗುತ್ತದೆ.

ಮನೆಗೆ ಬರುವ ಮಕ್ಕಳನ್ನು ತಾಯಿ ಡಬ್ಬದಲ್ಲಿದ್ದುದನ್ನೆಲ್ಲ ಖಾಲಿ ಮಾಡಿದ್ದೀಯಾ ಎಂದು ಮೊದಲ ಪ್ರಶ್ನೆಯನ್ನು, ಶಾಲೆಯಲ್ಲಿ ಹೋಮ ವರ್ಕ್ ಏನು ಕೊಟ್ಟಿದ್ದಾರೆ ಎಂದು ಕೇವಲ ಎರಡು ಪ್ರಶ್ನೆಗಳನ್ನು ಕೇಳುತ್ತಾಳೆ.

ಇದರ ಬದಲಾಗಿ ತಾಯಿ ಮಕ್ಕಳು ಮನೆಗೆ ಬಂದೊಡನೆ ಅವರನ್ನು ಪ್ರೀತಿಯಿಂದ ತಬ್ಬಿ ಮುದ್ದಿಸಿ ಆ ದಿನ ಮಕ್ಕಳು ಶಾಲೆಯಲ್ಲಿ ಯಾವ ಹೊಸ ವಿಷಯಗಳನ್ನು ಕಲಿತರು, ಅವರು ಹೇಗಿದ್ದಾರೆ ಎಂದು ಕೇಳಬೇಕು. ಮಕ್ಕಳಿಗೆ ಟಾಸ್ಕ್ ಓರಿಯೆಂಟೆಡ್ ಆಗಿ ಏನೇನು ಮಾಡಬೇಕು ಎಂದು ಆದೇಶಿಸುವ ಬದಲು, ಫನ್ ಓರಿಯೆಂಟೆಡ್ ಆಗಿ ಮಕ್ಕಳ ಅವಶ್ಯಕತೆಗಳನ್ನು ಅರಿತು ಅದಕ್ಕೆ ಪೂರಕವಾಗಿ ವರ್ತಿಸಬೇಕು.

ಇಂದಿನ ಪಾಲಕರಿಗೆ ಬೇಕಾಗಿರುವುದು ಪುಸ್ತಕಗಳು, ಪಾಠಗಳು ಪರೀಕ್ಷೆಗಳು ಮತ್ತು ಫಲಿತಾಂಶ ಪಟ್ಟಿಗಳು. ಮಗುವಿನ ವ್ಯಕ್ತಿತ್ವ ನಿರ್ಮಾಣಕ್ಕಾಗಿ ಪಾಲಕರು ಏನನ್ನೂ ಮಾಡುತ್ತಿಲ್ಲ? ಎಂಬುದು ವಿಷಾದದ ಸಂಗತಿ. ಮಕ್ಕಳ ಕ್ರಿಯಾಶೀಲತೆಯನ್ನು ಬಡಿದೆಬ್ಬಿಸುವ ಶಿಕ್ಷಕರು ಕಡಿಮೆಯಾಗಿದ್ದು ಆ ಜಾಗದಲ್ಲಿ ಶಿಕ್ಷಕ ವೃತ್ತಿಯನ್ನು ನೌಕರಿ ಎಂದು ಭಾವಿಸುವ ಕೆಲಸಗಾರರು ಭರ್ತಿಯಾಗಿದ್ದಾರೆ. ದಿನಕ್ಕೆ ಇಂತಿಷ್ಟು ಗಂಟೆ ಮಾತ್ರವೇ ಕೆಲಸ ಮಾಡುತ್ತೇನೆ ಎಂದು ಸಮಯದ ಮಿತಿಯನ್ನು ಹಾಕಿಕೊಳ್ಳುವ ಕೆಲಸಗಾರರಿಂದ ಇನ್ನೇನನ್ನು ನಿರೀಕ್ಷಿಸಲು ಸಾಧ್ಯ? ಈ ನಿಟ್ಟಿನಲ್ಲಿ ಪಾಲಕರು ಜಾಗರೂಕರಾಗಬೇಕಾದ ಅವಶ್ಯಕತೆ ಇದೆ.

ಇಲ್ಲಿ ಮುಖ್ಯವಾಗಿ ಕಾರ್ಯನಿರ್ವಹಿಸಬೇಕಾಗಿರುವುದು ಪಾಲಕರೇ ಎಂಬುದರಲ್ಲಿ ಎಳ್ಳಷ್ಟೂ ಸಂಶಯವಿಲ್ಲ. ತಾಯಿಯ ಗರ್ಭದಿಂದ ಹೊರ ಬರುವಾಗ ಮಗುವಿನ ಮೆದುಳು ಸುಮಾರು ಶೇಕಡ 25ರಷ್ಟು ಬೆಳೆದಿರುತ್ತದೆ. ಒಂದು ವರ್ಷದ ಹೊತ್ತಿಗೆ ಮತ್ತೆ ಐದರಿಂದ ಹತ್ತು ಶೇಕಡ ಮೆದುಳು ಬೆಳವಣಿಗೆಯಾಗಿದ್ದು ಸುಮಾರು 10 ವರ್ಷದ ಹೊತ್ತಿಗೆ ಶೇಕಡ 90ಕ್ಕಿಂತ ಹೆಚ್ಚು ಮಗುವಿನ ಮೆದುಳು ಬೆಳವಣಿಗೆಯನ್ನು ಹೊಂದುತ್ತದೆ. 16 ವರ್ಷದ ಹೊತ್ತಿಗೆ ಶೇಕಡ 100 ರಷ್ಟು ಬೆಳವಣಿಗೆಯನ್ನು ಕಾಣುತ್ತದೆ. ಆದ್ದರಿಂದ ಪಾಲಕರು ಮೊದಲ ಹತ್ತು ವರ್ಷದವರೆಗೆ ತಮ್ಮ ಹೆಚ್ಚಿನ ಸಮಯವನ್ನು ಮಕ್ಕಳಿಗೆ

ಮತ್ತು ಅವರ ಬೆಳವಣಿಗೆಗೆ ಮೀಸಲಿಡಬೇಕು. ಒಳ್ಳೆಯ ಕೌಟುಂಬಿಕ ವಾತಾವರಣವನ್ನು ನಿರ್ಮಿಸಬೇಕು.

ಬದುಕಿನ ಅತಿ ಮುಖ್ಯ ಘಟ್ಟಗಳಾದ ಮದುವೆ ಮತ್ತು ಮಕ್ಕಳ ಕುರಿತು ನಾವು ಯಾವುದೇ ರೀತಿಯ ಔಪಚಾರಿಕ ಶಿಕ್ಷಣವನ್ನು ಹೊಂದಿಲ್ಲದೇ ಇರುವುದೇ ನಮ್ಮ ಇಂದಿನ ಎಲ್ಲ ವೈವಾಹಿಕ ಮತ್ತು ಕೌಟುಂಬಿಕ ಸಮಸ್ಯೆಗಳಿಗೆ ಕಾರಣ ಎಂಬುದು ಸ್ಪಷ್ಟವಾಗಿದೆ. ಇದರ ಜೊತೆಗೆ ಒಳ್ಳೆಯ ಶಿಕ್ಷಕರನ್ನು ನಿರ್ಮಾಣ ಮಾಡಬೇಕಾಗಿದೆ. ಪಾಲಕರು ಮತ್ತು ಶಿಕ್ಷಕರು ಸೇರಿ ಮಗುವನ್ನು ಒಳ್ಳೆಯ ನಾಗರಿಕರಾಗಿಸುವ ನಿಟ್ಟಿನಲ್ಲಿ ಬೆಳೆಸಬೇಕಾಗಿರುವುದು ಅವರಿಬ್ಬರ ಆದ್ಯ ಕರ್ತವ್ಯವಾಗಿದ್ದು ಮಾಹಿತಿಗಳ ಜಾಲದಲ್ಲಿ ಮಗು ಸಿಲುಕಿಕೊಳ್ಳದಂತೆ ಅವರನ್ನು ಬೆಳೆಸುವುದು ಪಾಲಕರ

ಮುಂದಿರುವ ಮಹತ್ತರ ಜವಾಬ್ದಾರಿಯಾಗಿದೆ.

ಇನ್ನೂ ಹೇಳಬೇಕೆಂದರೆ ಇದೊಂದು ರೀತಿಯ ಮನಸ್ಸಿನ ಆಟ. ಮಕ್ಕಳು ತಮ್ಮ ಮನದ ಮಾತುಗಳನ್ನು ಕೇಳಲಿ ಎಂದು ಪಾಲಕರ ಗಮನವನ್ನು ಬಯಸುತ್ತದೆ.. ಆಗಮನವನ್ನು ಪಾಲಕರು ನೀಡದೆ ಹೋದಾಗ ಮಗುವಿನ ಆಸಕ್ತಿ ಮೊಬೈಲ್ ನೆಡೆಗೆ ತಿರುಗುತ್ತದೆ.

ಈ ಹಿಂದೆ ಶಾಲೆಗಳಲ್ಲಿ ಇರುತ್ತಿದ್ದ ಆಟದ ಅವಧಿಗಳು ಈಗ ಕಾಣ ಬರುವುದಿಲ್ಲ. ಆಟವಾಡುವ ಮಕ್ಕಳು ಸೋಲುವುದನ್ನು, ಗೆಲ್ಲುವುದನ್ನು ಏಳುವುದನ್ನು ಬೀಳುವುದನ್ನು ಹೊಂದಾಣಿಕೆಯ ಮನೋಭಾವವನ್ನು ಕಲಿಯುತ್ತಾರೆ. ಈ ಪಾಠಗಳು ಬದುಕಿಗೆ ಬಹು ಮುಖ್ಯವಾಗಿದ್ದು ಮಕ್ಕಳಿಗೆ ಪಾಠದ ಜೊತೆಗೆ ಆಟದ ಪಾಠವು ಅಷ್ಟೇ ಮುಖ್ಯವಾಗಿದ್ದು ಪಾಲಕರು ಮಕ್ಕಳೊಂದಿಗೆ ಆಟವಾಡುವ ಮೂಲಕ ಅವರೊಂದಿಗೆ ಹೆಚ್ಚು ಸಮಯ ಕಳೆಯಬೇಕು.. ಇದು ಮಗುವಿನಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತರಲು ಅತ್ಯವಶ್ಯಕ.

ಮಕ್ಕಳಲ್ಲಿ ಗುರುತರ ಬದಲಾವಣೆಗಳನ್ನು ತರಲು ಪಾಲಕರು ಬದಲಾಗಬೇಕಾದ, ತಮ್ಮ ಜವಾಬ್ದಾರಿಗಳನ್ನು ಅರಿತು ಮಕ್ಕಳೊಂದಿಗೆ ಹೆಚ್ಚಿನ ಸಮಯ ಕಳೆಯುವುದರ ಮೂಲಕ

ಅವರಲ್ಲಿ ಮೌಲ್ಯಗಳನ್ನು ಬಿತ್ತಿ ಉತ್ತಮ ಸಮಾಜ ನಿರ್ಮಾಣ–ಕ್ಕೆ ನಾಂದಿ ಹಾಡಬೇಕಾದ ಗುರುತರ ಜವಾಬ್ದಾರಿ ಪಾಲಕರಲ್ಲಿ ಮೂಡಬೇಕಾಗಿದೆ.

ಲೇಖನ
– ವೀಣಾ ಹೇಮಂತ್ ಗೌಡ ಪಾಟೀಲ್.
ಮುಂಡರಗಿ
ಗದಗ ಜಿಲ್ಲೆ

ಕಲಬುರಗಿ: ಪ್ರವಾದಿ ಜನ್ಮದಿನ ಈದ್ ಮಿಲಾದ್ ಪ್ರಯುಕ್ತ ನಿನ್ನೆ ನಗರದ ಮುಸ್ಲಿಂ ಚೌಕನಲ್ಲಿ ಹಮ್ಮಿಕೊಂಡಿದ್ದ 47ನೇ ಈದ್ ಮಿಲಾದನ ಭವ್ಯ ಮೆರವಣಿಗೆಗೆ ಗಣ್ಯಮಾನ್ಯರು ಜಂಟಿಯಾಗಿ ಚಾಲನೆ ನೀಡಿದರು, ಸಿರತ್ ಕಮೀಟಿ ಅಧ್ಯಕ್ಷ ಮತ್ತು ಕಾಂಗ್ರೆಸ್ ಮುಖಂಡ ಫರಾಜ್ ಉಲ್ ಇಸ್ಲಾಂ, ಜಿಲ್ಲಾಧಿಕಾರಿ ಇಕ್ರಂ ಶರೀಫ್, ಪೊಲೀಸ್ ಆಯುಕ್ತರಾದ ಶರಣಪ್ಪ ಎಸ್.ಡಿ, ಕುಡಾ ಅಧ್ಯಕ್ಷ ಮಜರ ಆಲಂ ಖಾನ್, ವಾಹಜ ಬಾಬಾ ಜುನೈದಿ, ಅಹಮರೂಲ್ ಇಸ್ಲಾಂ ಸೇರಿದಂತೆ ಧಾರ್ಮಿಕ ಮುಖಂಡರು, ಸಮಾಜ ಬಾಂಧವರು ಭಾಗವಹಿಸಿದ್ದರು.

ಯುವ ಶಕ್ತಿಯಿಂದಲೇ ಬದಲಾವಣೆ ಸಾಧ್ಯ ; ನಿತೀನ್ ಗುತ್ತೇದಾರ

ಅಫಜಲಪುರ:ಬಿಜೆಪಿ ಮಂಡಲ ಯುವ ಮೋರ್ಚಾ ನೂತನ ಪದಾಧಿಕಾರಿಗಳು ಸಕ್ರಿಯವಾಗಿ ಪಾಲ್ಗೊಂಡು ಪಕ್ಷದ ಬಲವರ್ಧನೆಗೆ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು.ಯುವಶಕ್ತಿಯಿಂದಲೇ ಬದಲಾವಣೆ ಸಾಧ್ಯವಾಗುತ್ತದೆ ಎಂದು ಜಿಪಂ ಮಾಜಿ ಅಧ್ಯಕ್ಷ ನಿತಿನ್ ಗುತ್ತೇದಾರ್ ಹೇಳಿದರು.

ಪಟ್ಟಣದ ಶೆಟ್ಟಿ ಕಲ್ಯಾಣ ಮಂಟಪದಲ್ಲಿ ಬಿಜೆಪಿ ಪಕ್ಷದ ವತಿಯಿಂದ ಎಸ್ ಐಆರ್ ಪರಿಶೀಲನಾ ಸಭೆಗೆ ಚಾಲನೆ ನೀಡಿ ಮಾತನಾಡಿದ ಅವರು,ಒಟ್ಟು 2,50,235 ಮತದಾರರ ಪೈಕಿ 38,925(ಶೇ.16) ಮತದಾರರು ಕರಡು ಮತದಾರರ ಪಟ್ಟಿಯಿಂದ ಹೊರಗುಳಿದಿದ್ದಾರೆ. 105645 ಗಂಡು ಮತದಾರರು ಹಾಗೂ 98738 ಹೆಣ್ಣು ಮತದಾರರು ಅಲ್ಲದೇ ಇತರೆ ಮತದಾರರು 18 ಜನ ಹೊಂದಿದ್ದಾರೆ.6081 ಮತದಾರರು ಮರಣ ಹೊಂದಿದ್ದಾರೆ.25413 ಶಾಶ್ವತ ಸ್ಥಳಾಂತರ ಗೊಂಡಿದ್ದಾರೆ. 2024 ಗೈರು ಹಾಜರಿ ಹೊಂದಿದ್ದಾರೆ. 3012 ಡಬಲ್ ಹೊಂದಿದ ಮತದಾರರು, 2395 ಇತರೆ ಮತದಾರರು ಸೇರಿ ಒಟ್ಟು 38925 ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ.ಹೀಗಾಗಿ ಇನ್ನೂ 6909 ಮತದಾರ–ರಿಗೆ ನೋಟಿಸ್ ನೀಡುವ ಪ್ರಕ್ರಿಯೆ ಆರಂಭವಾಗಿದೆ. ಆದ್ದರಿಂದ ಬಿಜೆಪಿ ಪಕ್ಷದ ಕಾರ್ಯಕರ್ತರು ಜಾಗೃತರಾಗಿ

ಮತದಾನ ಉಳಿಸಿಕೊಳ್ಳುವುದರ ಜತೆಗೆ ಅಕ್ಕ ಪಕ್ಕದ ಮನೆಯವರ ಮತದಾನವು ಇದೆಯೋ ಅಥವಾ ಇಲ್ಲವೋ ಎಂದು ಪರಿಶೀಲಿಸಬೇಕು,ಒಂದು ವೇಳೆ ಇಲ್ಲದಿದ್ದರೆ ಮತದಾನ ನೋಂದಣಾಧಿಕಾರಿಗಳಿಗೆ ದೂರು ಸಲ್ಲಿಸಬೇಕು ಎಂದರು.

ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ ಬಗಲಿ ಹಾಗೂ ಅಫಜಲಪುರ ಮಂಡಲ ಅಧ್ಯಕ್ಷ ವಿದ್ಯಾಧರ ಮಂಗಳೂರು ಮಾತನಾಡಿ,ಮಂಡಲ ಯುವ ಮೋರ್ಚಾ ಕಾರ್ಯಕರ್ತರು ಹಾಗೂ ಪದಾಧಿಕಾರಿಗಳು ಪಕ್ಷ ಸಂಘಟನೆಗೆ ಮುಂದಾಗಬೇಕು ಅಲ್ಲದೇ ಎಸ್ಐಆರ್ ಪ್ರಕ್ರಿಯೆಯಿಂದ ಏನಾದರೂ ಗೊಂದಲಗಳು ಇದ್ದರೆ ಅಥವಾ ಬೇರೆ ರಾಜ್ಯದ ಜನರ ಹೆಸರು ಅನಧಿಕೃತವಾಗಿ ನೋಂದಣಿ ಆಗಿದ್ದರೆ ತಕ್ಷಣವೇ ಚುನಾವಣಾಧಿಕಾರಿಗೆ ದೂರು ಸಲ್ಲಿಸಬೇಕು ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಹಿಂದುಳಿದ ವರ್ಗಗಳ ರಾಜ್ಯ ಪ್ರಧಾನ ಕಾರ್ಯದರ್ಶಿ ಅವ್ವಣ್ಣ ಮ್ಯಾಕೇ–ರಿ,ಆನಂದ ಪಾಟೀಲ್,ಮಲ್ಲಿಕಾರ್ಜುನ ಲಿಂಗದಹಳ್ಳಿ, ವಿಶ್ವನಾಥ ರೇವೂರ, ಬೀರಣ್ಣ ಕಲ್ಲೂರ, ಶರಣು ಪದಕಿ,ಧಾನು ಪತಾಟೆ,ಶೈಲೇಶ್ ಗುಣಾರಿ,ಸಚೀನ್ ರಾಠೋಡ,ಸುರೇಖಾ ಪದಕಿ,ಉಪಸ್ಥಿತರಿದ್ದರು.

ಕಲ್ಯಾಣ ಕರ್ನಾಟಕದ ಶಿಕ್ಷಣ ಹರಿಕಾರ ಡಾ.ಅಪ್ಪ

ಕಲಬುರಗಿ: ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರು ಕಲ್ಯಾಣ ಕರ್ನಾಟಕವನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸಿದ ಮಹಾನ್ ಶಿಕ್ಷಣ ಹರಿಕಾರ ಎಂದು ನಿವೃತ್ತ ಪ್ರಾಚಾರ್ಯ ಪೊ.ಕೆ.ಎಸ್.ನಾಯಕ್ ಹೇಳಿದರು.

ಅಖಿಲ ಭಾರತ ಶಿವಾನುಭವ ಮಂಟಪ ಶರಣಬಸವೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ 40 ದಿನಗಳ ಉಪನ್ಯಾಸ ಮಾಲಿಕೆಯಲ್ಲಿ ಬುಧವಾರ ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರು ಮತ್ತು ಶಿಕ್ಷಣ ಸಂಸ್ಥೆಗಳು ಎಂಬ ವಿಷಯ ಕುರಿತು ಮಾತನಾಡಿದರು.

ಶರಣಬಸವೇಶ್ವರ ಸಂಸ್ಥಾನದ ದಾಸೋಹ ಪರಂಪರೆಯಲ್ಲಿ ಅನ್ನದಾಸೋಹದ ಜೊತೆಗೆ ಶಿಕ್ಷಣ ದಾಸೋಹಕ್ಕೂ ಮಹತ್ವ ನೀಡಲಾಯಿತು. 1934ರಲ್ಲಿ ಮಹಾದೇವಿ ಕನ್ಯಾ ಶಾಲೆಯನ್ನು ಕನ್ನಡ ಮಾಧ್ಯಮದಲ್ಲಿ ಆರಂಭಿಸುವ ಮೂಲಕ ಹೆಣ್ಣುಮಕ್ಕಳ ಶಿಕ್ಷಣಕ್ಕೆ ಮಹತ್ವದ ಹೆಜ್ಜೆ ಇಡಲಾಯಿತು. ಆ ಕಾಲದಲ್ಲಿ ಮಹಿಳೆಯರಿಗೆ ಶಿಕ್ಷಣದ ಅವಕಾಶಗಳು ಸೀಮಿತವಾಗಿದ್ದ ಸಂದರ್ಭದಲ್ಲಿ ಇದು ಪ್ರಗತಿಪರ ಪ್ರಯತ್ನವಾಗಿತ್ತು.

ಲಿಂ.ಪರಮ ಪೂಜ್ಯ ದೊಡ್

■ ಉದಯರಶ್ಮಿ ದಿನಪತ್ರಿಕೆ

ಬದುಕೆಂದರೆ..!

ರಾಜ ನುಡಿ

ಮನುಷ್ಯನ ಬದುಕು ಬಹುಶಃ ಬೇಕು ಮತ್ತು ಬೇಡ ಎಂಬ ಎರಡು ಪದಗಳ ನಡುವೆ ನಡೆಯುವ ನಿರಂತರ ಪಯಣ.

ಚಿಕ್ಕವನಿದ್ದಾಗ ಆಟಿಕೆ ಬೇಕು, ಶಾಲೆಗೆ ಹೋದಾಗ ಒಳ್ಳೆಯ ಅಂಕ ಬೇಕು, ಬೆಳೆದಾಗ ಒಳ್ಳೆಯ ಉದ್ಯೋಗ ಬೇಕು,

ನಂತರ ಮನೆ, ಹಣ, ಹೆಸರು, ಗೌರವ ಹೀಗೆ 'ಬೇಕು'ಗಳ ಪಟ್ಟಿ ಬೆಳೆಯುತ್ತಲೇ ಹೋಗುತ್ತದೆ. ಆದರೆ ಬದುಕು ಒಂದು ಹಂತಕ್ಕೆ ಬಂದಾಗ ಹಿಂದೆ ಬೇಕೆಂದು ಬಯಸಿದ್ದ ಅನೇಕ ಸಂಗತಿಗಳೇ ಇಂದು ಬೇಡ ಎನಿಸಲು ಆರಂಭಿಸುತ್ತವೆ.

ಒಮ್ಮೆ ಹೆಚ್ಚು ಹಣ ಬೇಕೆನಿಸುತ್ತದೆ. ನಂತರ ಹಣಕ್ಕಾಗಿ ಕಳೆದುಕೊಂಡ ನೆಮ್ಮದಿ ಬೇಡವೆನಿಸುತ್ತದೆ.

ಹೆಚ್ಚು ಜನರ ಪರಿಚಯ ಬೇಕೆನಿಸುತ್ತದೆ. ನಂತರ ಮನಸ್ಸನ್ನು ಅರ್ಥಮಾಡಿಕೊಳ್ಳುವ ಕೆಲವೇ ಜನರು ಸಾಕೆನಿಸುತ್ತದೆ.

ಎಲ್ಲರ ಮೆಚ್ಚುಗೆ ಬೇಕೆನಿಸುತ್ತದೆ. ನಂತರ ನಮ್ಮ ಮನಸ್ಸಿಗೆ ನಾವು ಸತ್ಯವಾಗಿರುವುದೇ ಮುಖ್ಯವೆನಿಸುತ್ತದೆ.

ವಿಚಿತ್ರವೆಂದರೆ ಬೇಕೆಂಬ ಆಸೆ ನಮ್ಮನ್ನು ಓಡಿಸಿದರೆ ಬೇಡವೆಂಬ ಅರಿವು ನಮ್ಮನ್ನು ನಿಲ್ಲಿಸುತ್ತದೆ. ಬದುಕಿನಲ್ಲಿ ಪ್ರತಿಯೊಂದನ್ನೂ ಪಡೆಯುವುದೇ ಯಶಸ್ಸಲ್ಲ. ಯಾವುದನ್ನು ಪಡೆಯಬೇಕು, ಯಾವುದನ್ನು ಬಿಟ್ಟುಕೊಡಬೇಕು ಎಂಬ ಅಂಶವು ಕೂಡಾ ಯಶಸ್ಸಿನ ಒಂದು ಭಾಗ. ಎಲ್ಲವೂ ಬೇಕೆಂದು ಹಂಬಲಿಸಿದರೆ ಮನಸ್ಸಿಗೆ ವಿಶ್ರಾಂತಿ ಸಿಗುವುದಿಲ್ಲ. ಎಲ್ಲವನ್ನೂ ಬೇಡವೆಂದರೆ ಬದುಕಿಗೆ ಅರ್ಥ ಉಳಿಯುವುದಿಲ್ಲ. ಆದ್ದರಿಂದ ಬದುಕಿನ ಸೌಂದರ್ಯ 'ಬೇಕು'ಗಳನ್ನು ಹೆಚ್ಚಿಸುವುದರಲ್ಲಿ ಇಲ್ಲ. ಅಗತ್ಯವಾದ 'ಬೇಕು'ಗಳನ್ನು ಗುರುತಿಸಿ, ಅನಗತ್ಯವಾದ 'ಬೇಡ' ಗಳನ್ನು ಧೈರ್ಯವಾಗಿ ಒಪ್ಪಿಕೊಳ್ಳುವುದರಲ್ಲಿ ಇದೆ.

ಕೆಲವೊಮ್ಮೆ ನಾವು ಬಯಸಿದ್ದು ಸಿಗದಿರುವುದೇ ಒಳ್ಳೆಯದು. ಏಕೆಂದರೆ ನಮಗೆ ಬೇಕೆಂದು ಅನಿಸಿದ್ದೆಲ್ಲವೂ ನಮಗೆ ಒಳ್ಳೆಯದಾಗಿರಬೇಕೆಂದಿಲ್ಲ. ಹಾಗೆಯೇ ನಮಗೆ ಬೇಡವೆಂದು ದೂರ ಮಾಡಿದ ಕೆಲವು

ಎಲ್ಲವೂ ಬೇಡವೆಂದರೆ ಬದುಕು ರುಚಿಸದು. ಬೇಕಾದುದನ್ನು ಬಯಸಿ, ಬೇಡವಾದುದನ್ನು ಬಿಡುವ ವಿವೇಕ ಬಂದಾಗಲೇ ಬದುಕು ಪರಿಪೂರ್ಣವಾಗುವುದು.

ಅನುಭವಗಳೇ ಮುಂದೆ ನಮ್ಮನ್ನು ಬೆಳೆಸಬಹುದು. ಬೇಕು ಬೇಡಗಳೆಂಬ ಆಸೆಗಳು ಕಲಿಸುವ ದೊಡ್ಡ ಪಾಠ ಏನೆಂದರೆ ಎಲ್ಲವೂ ಬೇಕೆಂದರೆ ನೆಮ್ಮದಿ ಸಿಗದು.

ಲೇಖನ
– ಡಾ.ರಾಜಶೇಖರ
ನಾಗೂರ
ಸಂಚಾಲಕರು
'ನಮ್ಮ ಕಥಾ ಅರಮನೆ'

ಜಾರ್ಖಂಡನಿಂದ ಬಂದ ಗ್ಯಾಸ್ಟ್ರಿಕ್ ಕ್ಯಾನ್ಸರ್ ರೋಗಿಗೆಕಲಬುರಗಿ ಎಕೆ ಆಸ್ಪತ್ರೆಯಲ್ಲಿ ಯಶಸ್ವಿ ಶಸ್ತ್ರಚಿಕಿತ್ಸೆ

ಕಲಬುರಗಿ:ಜಾರ್ಖಂಡ್ ರಾಜ್ಯದಿಂದ ಕಲಬುರಗಿಯ ಎಕೆ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದ 46 ವರ್ಷದ ಅಜೀಮ್ ಮಿಯಾ ಅವರಿಗೆ ಗ್ಯಾಸ್ಟ್ರಿಕ್ ಕ್ಯಾನ್ಸರಗೆ ಯಶಸ್ವಿ ಶಸ್ತ್ರಚಿಕಿತ್ಸೆ ನಡೆಸಲಾಗಿದೆ.

ಅಜೀಮ್ ಮಿಯಾ ಅವರು ಹೊಟ್ಟೆ ನೋವು, ಹಸಿವು ಕಡಿಮೆಯಾಗುವುದು ಹಾಗೂ ವಾಂತಿ ಸಮಸ್ಯೆಯಿಂದ ಬಳಲುತ್ತಿದ್ದರು. ಹೆಚ್ಚಿನ ಚಿಕಿತ್ಸೆಗಾಗಿ ಅವರು ಜಾರ್ಖಂನಿಂದ ಕಲಬುರಗಿಯ ಎಕೆ ಆಸ್ಪತ್ರೆಗೆ ಆಗಮಿಸಿದ್ದು, ಆಸ್ಪತ್ರೆಯಲ್ಲಿ ನಡೆಸಿದ ಪರೀಕ್ಷೆಗಳ ಮೂಲಕ ಅವರ ಹೊಟ್ಟೆಯಲ್ಲಿ ಕ್ಯಾನ್ಸರ್ ಇರುವುದು ಪತ್ತೆಯಾಯಿತು.

ಅಪ್ಪರ್ ಜಿಐ ಎಂಡೋಸ್ಕೋಪಿ ಹಾಗೂ ಬಯೋಪ್ಸಿ ಪರೀಕ್ಷೆಗಳ ನಂತರ, ಅವರಿಗೆ ಅಡೆನೋಕಾರ್ಸಿನೋಮಾ ಆಫ್ ಸ್ಟಮಕ್ (ಗ್ಯಾಸ್ಟ್ರಿಕ್ ಕ್ಯಾನ್ಸರ್) ಇರುವುದು ದೃಢಪಟ್ಟಿತು.

ರೋಗಿಯ ಆರೋಗ್ಯ ಸ್ಥಿತಿಯನ್ನು ಸಂಪೂರ್ಣವಾಗಿ ಪರಿಶೀಲಿಸಿ ಅಗತ್ಯ ಸಿದ್ಧತೆಗಳ ನಂತರ, ಎಕೆ ಆಸ್ಪತ್ರೆಯ ಕನ್ಸಲ್ಟೆಂಟ್ ಗ್ಯಾಸ್ಟ್ರೋ ಸರ್ಜನ್ ಡಾ. ಆರಿಫ್ ರಝಾ ಅಹ್ಮದ್ ಅವರ ನೇತೃತ್ವದಲ್ಲಿ ಸಟೋಟಲ್ ಗ್ಯಾಸ್ಟ್ರೆಕ್ಟಮಿ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನಡೆಸಲಾಯಿತು.ಶಸ್ತ್ರಚಿಕಿತ್ಸೆಯ ನಂತರ ರೋಗಿಯನ್ನು ಎಕೆ ಆಸ್ಪತ್ರೆಯ ಹೈ ಡಿಪೆಂಡೆನ್ಸಿ ಯುನಿಟ್ ನಲ್ಲಿ ವಿಶೇಷ ನಿಗಾದಲ್ಲಿರಿಸಿ ಚಿಕಿತ್ಸೆ ನೀಡಲಾಯಿತು. ವೈದ್ಯರು, ಶಸ್ತ್ರಚಿಕಿತ್ಸಾ ತಂಡ, ಅನಸ್ತೇಶಿಯಾ ತಂಡ, ಕ್ರಿಟಿಕಲ್ ಕೇರ್ ಹಾಗೂ ನರ್ಸಿಂಗ್

ಸಿಬ್ಬಂದಿಯ ನಿರಂತರ ಆರೈಕೆಯಿಂದ

ರೋಗಿಯ ಆರೋಗ್ಯದಲ್ಲಿ ಉತ್ತಮ ಚೇತರಿಕೆ ಕಂಡುಬಂದಿತು.

ಕೆಲವು ದಿನಗಳ ನಂತರ ರೋಗಿಗೆ ಹಂತ ಹಂತವಾಗಿ ಆಹಾರವನ್ನು ಆರಂಭಿಸಲಾಯಿತು. ಆರೋಗ್ಯದಲ್ಲಿ ತೃಪ್ತಿಕರ ಸುಧಾರಣೆ ಕಂಡ ಹಿನ್ನೆಲೆಯಲ್ಲಿ ಅವರನ್ನು ವಾಗೆ ಸ್ಥಳಾಂತರಿಸಲಾಯಿತು.ಪ್ರಸ್ತುತ ರೋಗಿಯ ಆರೋಗ್ಯ ಸ್ಥಿರವಾಗಿದ್ದು, ಅವರು ಉತ್ತಮ ಚೇತರಿಕೆ ಕಂಡು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಜಾರ್ಖಂಡ ನಂತಹ ದೂರದ ರಾಜ್ಯದಿಂದಲೂ ರೋಗಿಗಳು ಕಲಬುರಗಿಯ ಎಕೆ ಆಸ್ಪತ್ರೆಯನ್ನು ಆಯ್ಕೆ ಮಾಡಿಕೊಂಡು ಚಿಕಿತ್ಸೆ ಪಡೆಯುತ್ತಿರುವುದು, ಆಸ್ಪತ್ರೆಯಲ್ಲಿರುವ ನುರಿತ ತಜ್ಞ ವೈದ್ಯರು, ಅತ್ಯಾಧುನಿಕ ಚಿಕಿತ್ಸಾ ಸೌಲಭ್ಯಗಳು ಮತ್ತು ಗುಣಮಟ್ಟದ ಆರೋಗ್ಯ ಸೇವೆಯ ಮೇಲಿನ ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ.ಎಕೆ ಆಸ್ಪತ್ರೆ ಸಂಕೀರ್ಣ ಶಸ್ತ್ರಚಿಕಿತ್ಸೆ ಮತ್ತು ಅತ್ಯಾಧುನಿಕ ವೈದ್ಯಕೀಯ ಸೇವೆಗಳಿಗೆ ವಿಶ್ವಾಸಾರ್ಹ ಕೇಂದ್ರ ಎನಿಸಿದೆ.

ನಂದೂರು ಕೈಗಾರಿಕೆ ಘಟಕಕ್ಕೆ ಡಿ.ಸಿ. ಭೇಟಿಡೇರಿ ಕ್ಲಾಸಿಕ್ ಐಸ್ ಕ್ರೀಮ್ ಘಟಕ ನಿರ್ಮಾಣ ಕಾಮಗಾರಿ ವೀಕ್ಷಣೆ

ಕಲಬುರಗಿ:ಜಿಲ್ಲಾಧಿಕಾರಿ ಇಕ್ರಂ ಶರೀಫ್ ಅವರು ಬುಧವಾರ ಶಹಾಬಾದ ರಸ್ತೆಯ ನಂದೂರು–ಕೆಸರಟಗಿ ವಸಾಹತು ಪ್ರದೇಶದ 3ನೇ ಹಂತದಲ್ಲಿ ಸುಮಾರು 290 ಕೋಟಿ ರೂ. ಹೂಡಿಕೆಯೊಂದಿಗೆ ನಿರ್ಮಾಣವಾಗುತ್ತಿರುವ ಮೆ. ಡೇರಿ ಕ್ಲಾಸಿಕ್ ಐಸ್ ಕ್ರೀಮ್ ಘಟಕ ಕಾಮಗಾರಿಗೆ ಭೇಟಿ ನೀಡಿ ಪರಿಶೀಲಿಸಿದರು.

ಸುಮಾರು 60 ಎಕರೆ ಪ್ರದೇಶದಲ್ಲಿ ತಲೆ ಎತ್ತುತ್ತಿರುವ ಉದ್ದೇಶಿತ ಘಟಕವು ಐಸ್ ಕ್ರೀಮ್, ಫ್ರೋಜನ್ ಡೆಸರ್ಟ್, ಕುಲ್ಫಿ ಸೇರಿದಂತೆ ಡೇರಿ ಪದಾರ್ಥಗಳ ಉತ್ಪನ್ನ ಜೊತೆಗೆ ಕೋಲ್ಡ್ ಸ್ಟೋರೇಜ್ ಘಟಕ ಹೊಂದಿದ್ದು, ಇದರ ಸ್ಥಾಪನೆಯಿಂದ ಸ್ಥಳೀಯವಾಗಿ 900 ಜನರಿಗೆ ಉದ್ಯೋಗ ಸಿಗುವ ಅಂದಾಜು ಹೊಂದಲಾಗಿದೆ. ಇದಲ್ಲದೆ ಡೇರಿ ಘಟಕಕ್ಕೆ ಪೂರಕವಾಗಿ ಕೈಗಾರಿಕೆಗಳು ಸಹ ಇಲ್ಲಿಗೆ ಬರಲಿರುವುದ–ರಿಂದ ಸ್ಥಳೀಯ ಆರ್ಥಿಕ ವೇಗವಾಗಿ ಬೆಳೆಯಲು ಸಹಕಾರಿಯಾಗಲಿದೆ.

ಇದೇ ಸಂದರ್ಭದಲ್ಲಿ ವಸಾಹತು ಪ್ರದೇಶದಲ್ಲಿನ ದಾಲ್ ಮಿಲ್ ಉದ್ದಿಮೆದಾರರನ್ನು ಭೇಟಿ ಮಾಡಿ ಅವರ ಸಮಸ್ಯೆ ಆಲಿಸಿದ ಡಿ.ಸಿ ಅವರು, ವಸಾಹತು ಪ್ರದೇಶದಲ್ಲಿ (ಮಹಿಳಾ ಪಾರ್ಕ್) ಒಳಗೊಂಡಂತೆ ಕೈಗಾ–ರಿಕೆ ಸ್ಥಾಪಿಸಲು ನಿವೇಶನ ಪಡೆದು ನಿಗದಿತ ಅವಧಿಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸದ ನಿವೇಶನಗಳನ್ನು ಕೂಡಲೆ ಸರ್ವೆ ಮಾಡಿ ಗುರುತಿಸಿ ಅವುಗಳನ್ನು ರದ್ದುಗೊಳಿಸಿ ಸದರಿ ನಿವೇಶನಗಳನ್ನು ಹೊಸ ಉದ್ದಿಮೆಗಳಿಗೆ ಹಂಚಿಕೆ ಮಾಡಲು ಪ್ರಕ್ರಿಯೆ ಆರಂಭಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.ಇದಲ್ಲದೆ ಇದೇ ಇಂ–ಡಸ್ಟ್ರಿಯಲ್ ಏರಿಯಾದಲ್ಲಿ ಸುಮಾರು 50 ಎಕರೆ ಪ್ರದೇಶದಲ್ಲಿ ರಾಜ್ಯ ಸರ್ಕಾರದಿಂದ ಟೆಕ್ಸ್ ಟೈಲ್ ಪಾರ್ಕ್ ಸ್ಥಾಪನೆ ಕಾರ್ಯ ನೆನೆಗುದ್ದಿಗೆ ಬಿದ್ದಿದನ್ನು ಅರಿತ ಜಿಲ್ಲಾಧಿಕಾ–ರಿಗಳು, ಯೋಜನೆ ಸಾಕಾರಗೊಳಿಸುವ ನಿಟ್ಟಿನಲ್ಲಿ ಇದಕ್ಕಿರುವ ಅಡೆತಡೆ ಕೂಡಲೆ ನಿವಾರಿಸುವಂತೆ ಡಿ.ಐ.ಸಿ. ಜಂಟಿ ನಿರ್ದೇಶಕರಿಗೆ ಡಿ.ಸಿ.ಸೂಚಿಸಿದರು.

ಆಟೋಮೋಬೈಲ್ ಕ್ಲಸ್ಟರ್ ಸ್ಥಳ ಪರಿಶೀಲನೆ

ಆಟೋಮೋಬೈಲ್ ಘಟಕಗಳನ್ನು ಒಂದೇ ಕಡೆ ಸ್ಥಾಪಿಸುವ ಉದ್ದೇಶಿತ ಕಪನೂರ ಆಟೋಮೋಬೈಲ್ ಕ್ಲಸ್ಟರ್ ಸ್ಥಾಪನೆ ಸ್ಥಳಕ್ಕೂ ಡಿ.ಸಿ. ಅವರು ಭೇಟಿ ನೀಡಿ ಪರಿಶೀಲಿಸಿದರು. ಈಗಾಗಲೆ ಕೆ.ಐ.ಎ.ಡಿ.ಬಿ. ನಿಂದ 20 ಎಕರೆ ಪ್ರದೇಶ ಆಟೋ ಕ್ಲಸ್ಟರ್ ಗೆ ಮೀಸಲಿರಿಸಿದ್ದು, ಎಂ.ಎಸ್.ಸಿ.ಸಿ.ಡಿ.ಪಿ ಯೋಜನೆಯಡಿ ಅನುಮೋದನೆಗೆ ಸರ್ಕಾರದ ಹಂತದಲ್ಲಿ ಬಾಕಿ ಇದೆ ಎಂದು ಯೋಜನೆ ಕುರಿತು ಡಿ.ಸಿ. ಅವರಿಗೆ ಅಧಿಕಾರಿಗಳು ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಡಿ.ಸಿ ಅವರು ಇಲ್ಲಿನ ವಿವಿಧ 15 ಘಟಕಗಳ ಕಾರ್ಯವನ್ನು ಪರಿಶೀಲಿಸಿದರು.

ಜಿಲ್ಲಾ ಕೈಗಾರಿಕೆ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಅಜೀಮ್, ಕೆ.ಐ.ಎ.ಡಿ.ಬಿ ಕಾರ್ಯನಿರ್ವಾಹಕ ಅಭಿಯಂತ ನಾಗೇಶ, ಎ.ಇ.ಇ. ಪರಮೇಶ ಎ.ಇ. ಅನೀಲ ಮತ್ತು ಪ್ರಕಾಶ, ಜವಳಿ ಮತ್ತು ಕೈಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಬಿ.ವಿಠ್ಠಲ ರಾಜು, ಉಪನಿರ್ದೇಶಕ ರಾಘವೇಂದ್ರ ಎಸ್. ಹೊಸಮನಿ ಇದ್ದರು.

ಯುವಸಂಗಮ ಪೋಸ್ಟರ್ ಬಿಡುಗಡೆ ಮಾಡಿದ ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ

ಕಲಬುರಗಿ: ಕೇಂದ್ರದ ಶಿಕ್ಷಣ ಸಚಿವಾಲಯದ, ಉನ್ನತ ಶಿಕ್ಷಣ ಇಲಾಖೆಯ 'ಏಕ್ ಭಾರತ್ ಶ್ರೇಷ್ಠ ಭಾರತ್' ಯೋಜನೆಯಡಿ ದೇಶದ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಉನ್ನತ ಶಿಕ್ಷಣ ಸಂಸ್ಥೆಗಳ ಯುವಕ–ರಿಗಾಗಿ ಆಯೋಜಿಸಲಾಗುವ 'ಯುವ ಸಂಗಮ' ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ವಿನಿಮಯ ಕಾರ್ಯಕ್ರಮದ 7ನೇ ಹಂತದ ಪೊಸ್ಟರ್ ಅನ್ನು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ವಿಶ್ವವಿದ್ಯಾಲಯದಲ್ಲಿ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕುಲಪತಿಗಳು, ದೇಶದ ಯುವಜನತೆಯ ನಡುವೆ ಭಾವನಾತ್ಮಕ ಬಾಂಧವ್ಯವನ್ನು ಗಟ್ಟಿ, ಹಾಗೂ ಪರಸ್ಪರ ತಿಳುವಳಿಕೆ ಬೆಳೆಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಜೋಡಿ ರಾಜ್ಯಗಳು ಮತ್ತು ಜೋಡಿ ಶಿಕ್ಷಣ ಸಂಸ್ಥೆಗಳ ನಡುವೆ ಆಯೋಜಿಸಲಾಗುವ ಪರಸ್ಪರ ಅಧ್ಯಯನ ಹಾಗೂ ಪರಿಚಯ ಭೇಟಿಗಳ ಮೂಲಕ "ವೈವಿಧ್ಯತೆಯಲ್ಲಿ ಏಕತೆ" ಎಂಬ ಭಾರತದ ಮೂಲಭೂತ ಮೌಲ್ಯವನ್ನು ಬಲಪಡಿಸಲಾಗುತ್ತಿದೆ ಎಂದು ತಿಳಿಸಿದರು.

ದೇಶದ ಐಐಟಿ, ಐಐಎಂ, ಕೇಂದ್ರೀಯ ವಿ.ವಿ.ಗಳು ಹಾಗೂ ಎಸ್ಐಟಿ ಸೇರಿದಂತೆ ಒಟ್ಟು 20 ಪ್ರತಿಷ್ಠಿತ ಉನ್ನತ ಶಿಕ್ಷಣ ಸಂಸ್ಥೆಗಳನ್ನು ಈ ಕಾರ್ಯಕ್ರಮದ ನೋಡಲ್ ಸಂಸ್ಥೆಗಳಾಗಿ ಗುರುತಿಸಲಾಗಿದೆ. ಆಯ್ಕೆಯಾದ ಯುವಕರು ಸುಮಾರು 5 ರಿಂದ 7 ದಿನಗಳ ಶೈಕ್ಷಣಿಕ ಪ್ರವಾಸ ಮಾಡಲಿವೆ. ಸ್ಥಳೀಯ ಸಂಸ್ಕೃತಿ, ಸಂಪ್ರದಾಯಗಳು, ಶಿಕ್ಷಣ ಸಂಸ್ಥೆಗಳು, ಆಡಳಿತ ವ್ಯವಸ್ಥೆ, ನವೋದ್ಯಮಗಳು, ಕೈಗಾ–ರಿಕೆಗಳು, ಪರಿಸರ ವ್ಯವಸ್ಥೆಗಳು, ಐತಿಹಾಸಿಕ ಹಾಗೂ ಪರಂಪರೆಯ ತಾಣಗಳು ಮತ್ತು ಸಮುದಾಯ ಜೀವನವನ್ನು ಅಧ್ಯಯನ ಮಾಡಲಿದ್ದಾರೆ. ಸಿಯುಕೆಯ ಜೋಡಿ ಸಂಸ್ಥೆಯಾಗಿ ಮಧ್ಯಪ್ರದೇಶದ ಭೋಪಾನ ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್ (ಎಸ್ ಪಿ ಎ) ಆಯ್ಕೆಯಾಗಿದೆ. ಶೀಘ್ರದಲ್ಲೇ ಎಪಿಎ, ಭೋಪಾನ ವಿದ್ಯಾರ್ಥಿಗಳ ತಂಡ ಕರ್ನಾಟಕಕ್ಕೆ ಹಾಗೂ ಸಿಯುಕೆಗೆ ಭೇಟಿ ನೀಡಲಿದ್ದು, ಇದೇ ರೀತಿಯಲ್ಲಿ ಸಿಯುಕೆಯ ವಿದ್ಯಾರ್ಥಿಗಳ ತಂಡ ಮಧ್ಯಪ್ರದೇಶಕ್ಕೆ ತೆರಳಲಿದೆ. ಅಲ್ಲಿನ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ವಿನಿಮಯ ಕಾರ್ಯಕ್ರಮದಲ್ಲಿ ಭಾಗವಹಿಸಲಿದೆ ಎಂದು ತಿಳಿಸಿದರು.ಯುವ ಸಂಗಮ ಆನ್‌ಲೈನ್ ನೋಂದಣಿ ಇದೇ ಆಗಸ್ಟ್ 31, ಕೊನೆಯ ದಿನಾಂಕವಾಗಿದ್ದು, 18–30 ವರ್ಷದೊಳಗಿನ ಉನ್ನತ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ವೈಕೆಎಸ್ ಸ್ವಯಂಸೇವಕರು ಹಾಗೂ ಯುವ ವೃತ್ತಿಪರರು ಅಧಿಕೃತ ಯುವ ಸಂಗಮ ಪೋರ್ಟಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಈ ಕಾರ್ಯಕ್ರಮ ಐದು ಪ್ರಮುಖ ವಿಷಯವಾಗಿದ್ದು, ಪರ್ಯಟನ (ಪ್ರವಾಸೋದ್ಯಮ), ಪರಂಪರಾ (ಸಂಪ್ರದಾಯ ಮತ್ತು ಸಂಸ್ಕೃತಿ), ಪ್ರಗತಿ (ಅಭಿವೃದ್ಧಿ ಮತ್ತು ಆಡಳಿತ), ಪರಸ್ಪರ ಸಂಪರ್ಕ (ಜನರಿಂದ ಜನರಿಗೆ ಸಂಪರ್ಕ) ಹಾಗೂ ಪ್ರದ್ಯೋಗಿಕಿ (ತಂತ್ರಜ್ಞಾನ ಮತ್ತು ನವೋದ್ಯಮ). ರಾಷ್ಟ್ರೀಯ ಶಿಕ್ಷಣ ನೀತಿ ಯ ಆಶಯಗಳಿಗೆ ಅನುಗುಣವಾಗಿ ಭಾರತದ ಸಾಂಸ್ಕೃತಿಕ, ಭಾಷಿಕ, ಶೈಕ್ಷಣಿಕ ಮತ್ತು ಅಭಿವೃದ್ಧಿಯ ವೈವಿಧ್ಯತೆಯನ್ನು ಆಳವಾಗಿ ಅರಿತುಕೊಳ್ಳಲಿದ್ದು, ಪರಸ್ಪರ ತಿಳುವಳಿಕೆ, ರಾಷ್ಟ್ರೀಯ ಏಕತೆ ಮತ್ತು 'ಏಕ್ ಭಾರತ್–ಶ್ರೇಷ್ಠ ಭಾರತ್' ಮನೋಭಾವವನ್ನು ಮತ್ತಷ್ಟು ಬಲಪಡಿಸಲಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಯುವ ಸಂಗಮ ಕಾರ್ಯಕ್ರಮ ಸಂಯೋಜಕ ಡಾ. ಜಗದೀಶ ಬಿರಾದಾರ್ ಹಾಗೂ ಭಾಷಾಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಕೋಟ ಸಾಯಿ ಕೃಷ್ಣ ಉಪಸ್ಥಿತರಿದ್ದರು. ಹೆಚ್ಚಿನ ಮಾಹಿತಿಗಾಗಿ ಸಿಯುಕೆಯ ಯುವಸಂಗಮದ ನೋಡಲ್ ಅಧಿಕಾರಿ ಡಾ.ಶಿವ ಅವರನ್ನು ಸಂಪರ್ಕಿಸಬಹುದಾಗಿದೆ. ಮೊ : 9894297791,

ಕಲಬುರಗಿ: ಜಿಲ್ಲೆಯಲ್ಲಿ ಅಕ್ರಮ ಗೋಸಾಗಾಟ,ಅಕ್ರಮ ಕಸಾಯಿಖಾನೆ,ಅಕ್ರಮವಾಗಿ ಪಡಿತರ ಅಕ್ಕಿ ಸಾಗಣೆ ,ಮರುಳುಗಾರಿಕೆ ಮತ್ತು ಜೂಜಾಟ ನಡೆಸುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಶ್ರೀರಾಮಸೇನಾ ಜಿಲ್ಲಾಘಟಕದಿಂದ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.ಜಿಲ್ಲಾಧ್ಯಕ್ಷ ಲಕ್ಷ್ಮೀಕಾಂತ ಸ್ವಾದಿ,ರಾಮಸೇವಕ,ರಾಜು ವಾಘಮೋರೆ,ಪ್ರಶಾಂತ ಸೀರೂರ,ಉದಯ ಸುಲ್ತಾನಪುರ,ವೀರೇಶ ಬಿಂಗೆ,ಸಂಗು ಕಾಳಗನೂರ ಅವರು ಸೇರಿದಂತೆ ಹಲವರು ಪಾಲ್ಗೊಂಡರು.

ಕಲಬುರಗಿ: ಶುಕ್ರವಾರದ ರಕ್ಷಾಬಂಧನ (ರಾಖಿ ಹಬ್ಬ) ಆಚರಣೆ ಅಂಗವಾಗಿ ಯುವತಿಯರು, ಮಹಿಳೆಯರು ಇಂದು ನಗರದ ಮಾರುಕಟ್ಟೆಯಲ್ಲಿ ರಂಗುರಂಗಿನ,ವಿವಿಧ ವಿನ್ಯಾಸದ ರಾಖಿಗಳನ್ನು ಖರೀದಿಸಿದರು.

ಹವಾ ಮಲ್ಲಿನಾಥ ಮಹಾರಾಜರ ಜನ್ಮದಿನ ಅರ್ಥಪೂರ್ಣ ಆಚರಣೆಜೈ ಭಾರತ ಮಾತಾ ಸಮಿತಿಯಿಂದ ಪೊಲೀಸರಿಗೆ 501 ಹೆಲ್ಮೆಟ್ ಕೊಡುಗೆ

ಬೀದರ್: ಜೈ ಭಾರತ ಮಾತಾ ರಾಷ್ಟ್ರೀಯ ಸೇವಾ ಸಮಿತಿಯು ಪೊಲೀಸ–ರಿಗೆ 501 ಹೆಲ್ಮೆಟ್ ಕೊಡುಗೆಯಾಗಿ ನೀಡುವ ಮೂಲಕ ಸಮಿತಿಯ ರಾಷ್ಟ್ರೀಯ ಸಂಸ್ಥಾಪಕ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜರ ಜನ್ಮದಿನವನ್ನು ನಗರದಲ್ಲಿ ಬುಧವಾರ ಅರ್ಥಪೂರ್ಣವಾಗಿ ಆಚ–ರಿಸಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಸಮಿತಿಯ ಭಾಲ್ಕಿ ತಾಲ್ಲೂಕು ಘಟಕದ ಅಧ್ಯಕ್ಷ ಪಪ್ಪು ಪಾಟೀಲ ಖಾನಾಪುರ ಅವರು ಹೆಲ್ಮೆಟ್ ವಿತರಿಸಿದರು.

ಜನ್ಮದಿನದ ಅಂಗವಾಗಿ ಬೃಹತ್ ಗಾತ್ರದ ಕೇಕ್ ಕತ್ತರಿಸಲಾಯಿತು. ಸಭಿಕರಿಗೆ ಪ್ರಸಾದ ವಿತರಿಸಲಾಯಿತು.

ಎ

ಎಸ್‌ಐಆರ್ ಪೂರ್ಣ: ಸೆ.23ರೊಳಗೆ ಆಕ್ಷೇಪಣೆ ಸಲ್ಲಿಸಿ: ಭೋಸಗಿ

■ ಉದಯರಶ್ಮಿ ದಿನಪತ್ರಿಕೆ

ಅಥಣಿ: ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಖಖಖ) ಪ್ರಕ್ರಿಯೆಯಡಿ ಅಥಣಿ ವಿಧಾನಸಭಾ ಮತಕ್ಷೇತ್ರದಲ್ಲಿ ಒಟ್ಟು 2,43,842 ಎನ್ಯೂಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದ್ದು, ಶೇ.100ರಷ್ಟು ಫಾರ್ಮ್ ವಿತರಣೆ ಹಾಗೂ ಸಂಗ್ರಹಣೆ ಕಾರ್ಯ ಪೂರ್ಣಗೊಂಡಿದೆ. ಈ ಪೈಕಿ 2,23,002 ಫಾರ್ಮ್‌ಗಳನ್ನು (91.45%) ಡಿಜಿಟಲೀಕರಣಗೊಳಿಸಲಾಗಿದೆ ಎಂದು ಅಥಣಿ ತಾಲೂಕು ದಂಡಾಧಿಕಾರಿ ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿ ಸಿದರಾಯ ಭೋಸಗಿ ತಿಳಿಸಿದ್ದಾರೆ.

ಅವರು ಪಟ್ಟಣದ ತಾಲೂಕಾ ಆಡಳಿತ ಸೌದದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಅಥಣಿ ವಿಧಾನಸಭಾ ಮತಕ್ಷೇತ್ರದಲ್ಲಿ ಒಟ್ಟು 2,31,096 ಮತದಾರರು ಇದ್ದು, ಜೂನ್ 30ರಿಂದ ಆಗಸ್ಟ್ 17ರವರೆಗೆ ಎನ್ಯೂಮರೇಷನ್ ಫಾರ್ಮ್ ವಿತರಣೆ ಮತ್ತು ಸಂಗ್ರಹಣೆ ಕಾರ್ಯ ನಡೆಯಿತು. ಡಿಜಿಟಲೀಕರಣಗೊಂಡ ಮಾಹಿತಿಯ ಪರಿಶೀಲನೆಯಲ್ಲಿ 20,840 ಪ್ರಕರಣಗಳು ಂಖಆಆ ಪಟ್ಟಿಯಲ್ಲಿ ದಾಖಲಾಗಿವೆ.

ಇದೇ ವೇಳೆ, ಪರಿಶೀಲನಾ ಪ್ರಕ್ರಿಯೆಯಲ್ಲಿ 1,232 ಗೈರು ಮತದಾರರು, 10,668 ಶಾಶ್ವತವಾಗಿ ವಲಸೆ ಹೋದ ಮತದಾರರು, 5,561 ಮೃತ ಮತದಾರರು ಹಾಗೂ 3,376 ಪುನರಾವರ್ತಿತ ಮತದಾರರು ಎಂದು ಗುರುತಿಸಲಾಗಿದೆ. ಇತರ ಕಾರಣಗಳಿಗೆ ಸಂಬಂಧಿಸಿದಂತೆ 3 ಪ್ರಕರಣಗಳು ದಾಖಲಾಗಿವೆ.

ಮತದಾರರ ಮಾಹಿತಿಯ ಪರಿಶೀಲನೆಯಲ್ಲಿ 2,501 ಲಾಜಿಕಲ್ ಎರರ್ಸ್ ಹಾಗೂ 1,419 ನೋ–ಲಿಂಕೇಜ್ ಪ್ರಕರಣಗಳು ಸೇರಿದಂತೆ ಒಟ್ಟು 3,920 ಪ್ರಕರಣಗಳು ಪತ್ತೆಯಾಗಿದ್ದು, ಇವುಗಳ ಕುರಿತು ಅಗತ್ಯ ಪರಿಶೀಲನೆ ಹಾಗೂ ತಿದ್ದುಪಡಿ ಕ್ರಮ ಕೈಗೊಳ್ಳಲಾಗುತ್ತಿದೆ.

ಮತದಾರರ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಸೆಪ್ಟೆಂಬರ್ 23ರವರೆಗೆ ಅವಕಾಶ ಕಲ್ಪಿಸಲಾಗಿದೆ. ಆಗಸ್ಟ್ 24ರಿಂದ ಸೆಪ್ಟೆಂಬರ್ 23ರವರೆಗೆ ಸಲ್ಲಿಕೆಯಾಗುವ ಹಕ್ಕು ಮತ್ತು ಆಕ್ಷೇಪಣೆಗಳನ್ನು ಅಕ್ಟೋಬರ್ 22ರವರೆಗೆ ಪರಿಶೀಲಿಸಿ ವಿಲೇವಾರಿ ಮಾಡಲಾಗುವುದು ಎಂದು ಸಿದರಾಯ ಭೋಸಗಿ ತಿಳಿಸಿದ್ದಾರೆ. ಇದಲ್ಲದೆ, ಅಥಣಿ ವಿಧಾನಸಭಾ ಮತಕ್ಷೇತ್ರದ ಕರಡು ಮತದಾರರ ಪಟ್ಟಿಯನ್ನು ಗ್ರಾಮ ಪಂಚಾಯಿತಿ, ಗ್ರಾಮ ಚಾವಡಿ ಹಾಗೂ ಸಂಬಂಧಿಸಿದ ಮತಗಟ್ಟೆಗಳಲ್ಲಿ ಸಾರ್ವಜನಿಕರ ಪರಿಶೀಲನೆಗಾಗಿ ಪ್ರಕಟಿಸಲಾಗಿದೆ. ಮತದಾರರು ಕರಡು ಪಟ್ಟಿಯಲ್ಲಿ ತಮ್ಮ ಹೆಸರು ಹಾಗೂ ವಿವರಗಳನ್ನು ಪರಿಶೀಲಿಸಿಕೊಳ್ಳಬೇಕು. ಒಂದು ವೇಳೆ ಅರ್ಹ ವ್ಯಕ್ತಿಯ ಹೆಸರು ಕರಡು ಮತದಾರರ ಪಟ್ಟಿಯಲ್ಲಿ ಬಿಟ್ಟುಹೋಗಿದ್ದರೆ, ಸಂಬಂಧಿಸಿದ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ನಮೂನೆ 6ರಲ್ಲಿ ಅರ್ಜಿ ಸಲ್ಲಿಸುವ ಮೂಲಕ ಹೆಸರನ್ನು ಮರು ಸೇರ್ಪಡೆ ಮಾಡಿಕೊಳ್ಳಬಹುದು ಎಂದು ಅವರು ತಿಳಿಸಿದ್ದಾರೆ.

ಮಕ್ಕಳಿಗೆ ಸಂಸ್ಕಾರ ನೀಡುವ ಬಾಲಭಾರತಿ ಶಾಲೆ ಕಾರ್ಯ ಶ್ಲಾಘನೀಯ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಅಣ್ಣ ತಂಗಿಯ ಬಾಂಧವ್ಯ ಇವರದು ಶರೀರ ಕರಗಿದರೂ ಅವರ ಬಾಂಧವ್ಯ ಕರಗುವಂತಹದಲ್ಲಾ. ಸಹೋದರತ್ವ ಅಂದರೆ ತಂಗಿ ಶರಣೆ ಮುಕ್ತಾಯಕ್ಕ ಅಣ್ಣ ಅಜಗಣ್ಣ ರಂತಿರಬೇಕು ಎಂದು ಐನಾಪೂರ ಹಿರೇಮಠದ ಉಪಮನ್ಯು ಶಿವಾಚಾರ್ಯರು ಹೇಳಿದರು.

ಆಲಮೇಲ ಪಟ್ಟಣದ ವಿಶ್ವೇಶ್ವರ ಬಾಲಭಾರತಿ ಪ್ರಾಥಮಿಕ ಶಾಲೆಯಲ್ಲಿ ರಕ್ಷಾಬಂಧನ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಪೂಜ್ಯರು, ಇಂದು ನಾವೆಲ್ಲರೂ ಪಾಶ್ಚಾತ್ಯ ಸಂಸ್ಕೃತಿಗೆ ಮಾರು ಹೋಗುತ್ತಿದ್ದೇವೆ ಅದು ಅಪಾಯದ ಅಂಚಿನಲ್ಲಿ ನಮ್ಮನ್ನು ತಂದೊಡ್ಡಿದೆ ಹಾಗಾಗಿ ನಮ್ಮ ಭಾರತೀಯ ಸಂಸ್ಕೃತಿಯ ಪರಂಪರೆ ಆಚಾರ ವಿಚಾರಗಳನ್ನು ಉಳಿಸಿಕೊಂಡು ಹೋಗಿ ನಮ್ಮ ಮುಂದಿನ ಯುವ ಜನತೆಗೆ ಜಾಗೃತಿ ಮಾಡಬೇಕಾಗಿದೆ. ಅಂತಹ ಕಾರ್ಯವನ್ನು ಬಾಲಭಾರತಿ ಶಾಲೆಯು ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕವಿವಾಣಿ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕುದರತ್ ಅಲಿ ಭೂಸನೂರ ಮಾತನಾಡಿ, ಹೆಣ್ಣಿಗೆ ಸಮಾಜದ ಪ್ರತಿ ಪುರುಷರು ಅಣ್ಣ–ತಮ್ಮಂದಿರಾಗಿ ಅವಳಿಗೆ ಪ್ರತಿ ಹೆಜ್ಜೆಯಲ್ಲೂ ರಕ್ಷೆ ನೀಡಿದಾಗ ಮಾತ್ರ ಈ ರಕ್ಷಾ ಬಂಧನ ಹಬ್ಬಕ್ಕೆ ನಿಜ ಅರ್ಥ ಬರುವುದು ಎಂದರು.

ಈ ವೇಳೆ ಅರವಿಂದ ಕುಲಕರ್ಣಿ, ಅಲೋಕ ಬಡದಾಳ, ಮುಖ್ಯ ಶಿಕ್ಷಕ ಲಕ್ಷೀಪುತ್ರ ಕಿರನಳ್ಳಿ ಮಾತನಾಡಿದರು.

ಪಾಲಕ ಪ್ರತಿನಿಧಿ ತಿಪ್ಪಣ್ಣ ಕನ್ನೊಳ್ಳಿ , ಶಿಕ್ಷಕರಾದ ಚಂದ್ರಕಾಂತ ದೇವರಮನಿ, ಪ್ರಶಾಂತ ಗಡದೆ, ಲಕ್ಷ್ಮೀಬಾಯಿ ಹಳೇಮನಿ, ಸುವರ್ಣ ಸಾರಂಗಮಠ, ಸೀತಾ ಆರೇಶಂಕರ, ಸರುಬಾಯಿ ಬಂಡಗರ, ಸುನೀತಾ ಗುಂಡದ, ಅಂಜಲಿ ಕನ್ನೊಳ್ಳಿ ಉಪಸ್ಥಿತರಿದ್ದರು.

ಮೂರು ತಾಲೂಕುಗಳಿಗೆ ಮಾತ್ರ ಬರ ಘೋಷಣೆಗೆ ಆಕ್ರೋಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಸಂದರ್ಭದಲ್ಲಿ ಜಿಲ್ಲೆಯ ಕೇವಲ ಮೂರು ತಾಲೂಕುಗಳನ್ನು ಮಾತ್ರ ಬರಪೀಡಿತ ಎಂದು ಘೋಷಿಸಿರುವುದು ಖಂಡನೀಯ ಎಂದು ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ), ಬೆಂಗಳೂರು ರಾಜ್ಯಾಧ್ಯಕ್ಷ ಅಪ್ಪುರಾಜ್ ನಿಮಾದಾರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಿಲ್ಲೆಯ ಹಲವು ತಾಲೂಕುಗಳಲ್ಲಿ ಮಳೆ ಕೊರತೆಯಿಂದ ರೈತರು ಬಿತ್ತನೆ, ಬೆಳೆ ಬೆಳವಣಿಗೆ ಹಾಗೂ ಕೃಷಿ ಚಟುವಟಿಕೆಗಳಲ್ಲಿ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಮಳೆ ಕೈಕೊಟ್ಟ ಪರಿಣಾಮ ಬೆಳೆಗಳು ಒಣಗುತ್ತಿದ್ದು, ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ಸಂದರ್ಭದಲ್ಲಿ ಕೇವಲ ಮೂರು ತಾಲೂಕುಗಳನ್ನು ಮಾತ್ರ ಬರಪೀಡಿತ ಎಂದು ಘೋಷಿಸಿ, ಉಳಿದ ತಾಲೂಕುಗಳನ್ನು ನಿರ್ಲಕ್ಷಿಸಿರುವುದು ರೈತರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ವಿಜಯಪುರ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿನ ಮಳೆ ಕೊರತೆ, ಬೆಳೆ ಹಾನಿ, ಅಂತರ್ಜಲ ಮಟ್ಟ ಹಾಗೂ ರೈತರ ವಾಸ್ತವ ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸಿ, ಅರ್ಹವಾಗಿರುವ ಎಲ್ಲಾ ತಾಲೂಕುಗಳನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರ್ಪಡೆ ಮಾಡಬೇಕು ಎಂದು ಅಪ್ಪುರಾಜ್ ನಿಮಾದಾರ ಅವರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಡಿ.ಎನ್.ಸೊಲ್ಯೂಷನ್ಸ್ ಉದ್ಘಾಟನೆ ಸಂದರ್ಭದಲ್ಲಿ ಸಚಿವ ಎಂ.ಬಿ.ಪಾಟೀಲರಿಗೆ ವಿಜಯಪುರದ ನೌಕರರ ಭೇಟಿ

ಕಾರ್ಪೊರೇಟ್ ಲೋಕದಲ್ಲಿ ಹುಟ್ಟೂರಿನವರು ಕೊಟ್ಟ ಪುಲಕ!

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ಯಾವುದೋ ಒಂದು ಪ್ರತಿಷ್ಠಿತ ಕಂಪನಿಯ ಉದ್ಘಾಟನೆಯೋ, ಮತ್ತೊಂದು ಕಂಪನಿಯೊಂದಿಗೆ ಸಾವಿರಾರು ಕೋಟಿ ರೂಪಾಯಿ ಬಂಡವಾಳ ಹೂಡಿಕೆಯ ಒಡಂಬಡಿಕೆಯೋ ನಡೆಯುತ್ತಿದೆ ಎಂದರೆ ಕೈಗಾರಿಕಾ ಸಚಿವರಿಗೆ ಸಹಜವಾಗಿಯೇ ಖುಷಿಯಾಗುತ್ತದೆ. ಇದರಲ್ಲಿ ಎರಡು ಮಾತಿಲ್ಲ, ನಿಜ. ಆದರೆ, ದೇವನಹಳ್ಳಿ ತಾಲ್ಲೂಕಿನ ಕುಂದಾಣದಲ್ಲಿ ಮೊನ್ನೆ ನಡೆದ ಡಿ.ಎನ್.ಸೊಲ್ಯೂಷನ್ಸ್ ಕಂಪನಿಯ ತಯಾರಿಕಾ ಸ್ಥಾವರ ಮತ್ತು ಆರ್ & ಡಿ ಘಟಕಗಳ ಉತ್ಪಾದನೆಯಲ್ಲಿ ಎಂ ಬಿ ಪಾಟೀಲರು ರೋಮಾಂಚನಗೊಳ್ಳಲು ಇದ್ದ ಕಾರಣವೇ ಬೇರೆ ಎಂದರೆ ನೀವು ನಂಬಬೇಕು.

ಡಿ.ಎನ್.ಸೊಲ್ಯೂಷನ್ಸ್ ಅಂದರೆ ಇದು ದಕ್ಷಿಣ ಕೊರಿಯಾದ ಒಂದು ಅಗ್ರಮಾನ್ಯ ಕಂಪನಿ; ಮಶೀನ್ ಟೂಲ್ಸ್ ಕ್ಷೇತ್ರದಲ್ಲಿ ಇದರದು ದೊಡ್ಡ ಹೆಸರು. ಈ ಕಂಪನಿ ನಮ್ಮಲ್ಲೀಗ 600 ಕೋಟಿ ರೂಪಾಯಿ ಸುರಿದು ತನ್ನ ಎರಡೂ ಸ್ಥಾವರಗಳನ್ನು ಹೊಸದಾಗಿ ನಿರ್ಮಿಸಿದೆ. ಕಂಪನಿಯವರು ಸಹಜವಾಗಿಯೇ ಸಚಿವರನ್ನು ಉದ್ಘಾಟನೆಗೆ ಆಮಂತ್ರಿಸಿದ್ದರು.

ಆದರೆ, ಕಂಪನಿಯ ಕ್ಯಾಂಪಸ್ಸಿನಲ್ಲಿ ಎಂ ಬಿ ಪಾಟೀಲರಿಗೆ ಎದುರಾದ ದೃಶ್ಯವೇ ಬೇರೆ. ಅಂದರೆ, ಅವರು ಅಲ್ಲಿಗೆ ಹೋಗುತ್ತಿದ್ದಂತೆಯೇ, ಸಮವಸ್ತ್ರ ತೊಟ್ಟುಕೊಂಡು ಶಿಸ್ತಿನ ಸಿಪಾಯಿಗಳಂತೆ ನಿಂತಿದ್ದ 30–40 ಉದ್ಯೋಗಿಗಳ ಗುಂಪು ಇವರಿಗೆ ಮುತ್ತಿಗೆ ಹಾಕಿತು; ಆದರೆ ಅದು ಪ್ರತಿಭಟನೆಯ ಮುತ್ತಿಗೆಯಲ್ಲ, ಬದಲಿಗೆ ಅಂತರಾಳದ ಅಭಿಮಾನದ ಮುತ್ತಿಗೆ!

ಇವರೆಲ್ಲ ಯಾರೆಂದರೆ, ಮೂಲತಃ ವಿಜಯಪುರ ಜಿಲ್ಲೆಯ ಬೇರೆ ಬೇರೆ ಭಾಗಗಳಿಗೆ ಸೇರಿದವರು. ಇದಕ್ಕಿಂತ ಹೆಚ್ಚಾಗಿ ಎಂ ಬಿ ಪಾಟೀಲ ಅವರ ಪ್ರತಿಷ್ಠಿತ ಬಿ.ಎಲ್.ಡಿ.ಇ ಶಿಕ್ಷಣ ಸಂಸ್ಥೆಯ ಬೇರೆ ಬೇರೆ ಕಾಲೇಜುಗಳಲ್ಲಿ ಐಟಿಐ, ಡಿಪ್ಲೊಮಾ, ಪಾಲಿಟೆಕ್ನಿಕ್, ಎಂಜಿನಿಯರಿಂಗ್ ಇತ್ಯಾದಿ ಕೋರ್ಸುಗಳನ್ನು ಓದಿರುವವರು. ಸಚಿವರ ಸಲಹೆ ಮೇರೆಗೆ ನಡೆದ ಕ್ಯಾಂಪಸ್ ಸಂದರ್ಶನದಲ್ಲೇ ಇವರೆಲ್ಲ ಆಯ್ಕೆಯಾಗಿದ್ದಾರೆ. ಡಿ.ಎನ್.ಸೊಲ್ಯೂಷನ್ಸ್ ಕಂಪನಿಯಲ್ಲಿ ಇವರೆಲ್ಲ ಮೆರಿಟ್ ಮೇಲೆ ಉದ್ಯೋಗಗಳನ್ನು ಗಿಟ್ಟಿಸಿಕೊಂಡಿದ್ದಾರೆ. ಇದನ್ನೆಲ್ಲ ತಿಳಿದು ಸಚಿವರು ಪುಳಕಿತರಾದರು! ಇದಕ್ಕೆ ತಕ್ಕಂತೆ ಆ ಗುಂಪಿನಲ್ಲಿದ್ದವರಿಗೂ, 'ಆಹಾ ಇವರು ನಮ್ಮೂರಿನ ಸಚಿವರು..' ಎನ್ನುವ ಅಭಿಮಾನ ತುಂಬಿ ತುಳುಕುತ್ತಿತ್ತು.

ಈ ಗುಂಪಿನ ಬಳಿಗೆ ಯಾವುದೇ ಹಮ್ಮುಬಿಮ್ಮಿಲ್ಲದೆ ಹೋದ ಸಚಿವರು, ಅವರೊಂದಿಗೆ ಕುಶಲೋಪರಿ ನಡೆಸಿದರು; ಕೈಕುಲುಕಿದರು; ಯಾವುದೇ ಶಿಷ್ಟಾಚಾರವಿಲ್ಲದೆ ಅವರೊಂದಿಗೆ ಲೋಕಾಭಿರಾಮವಾಗಿ ಮಾತನಾಡಿದರು; 'ನೀವೆಲ್ಲರೂ ನಮ್ಮ ವಿಜಯಪುರದವರು ಅಂತ ಕೇಳಿ ತುಂಬಾ ಸಂತೋಷವಾಯ್ತು, ನೀವು ಕಂಪನಿಗೆ ಒಳ್ಳೆಯ ಹೆಸರು ತರಬೇಕು; ನೀವೂ ಸಾಧನೆ ಮಾಡಬೇಕು, ನಮ್ಮ ಹುಡುಗರು ಹಾರ್ಡ್ ವರ್ಕ್ಸ್ ಅಂತ ಹೇಳಿನಿ.. ಜೋಪಾನ.. ಊರಿನ ಹುಡುಗರಿಗೂ ಇಲ್ಲಿರುವ ಅವಕಾಶಗಳ ಬಗ್ಗೆ ತಿಳಿಸಿ' ಎಂದರು.

ಇದನ್ನು ಕಂಡು ಕಂಪನಿಯ ಅಧಿಕಾರಿಗಳು ಮತ್ತು ಉಳಿದ ಸಿಬ್ಬಂದಿ ವರ್ಗ ಮೂಕವಿಸ್ಮಿತವಾಯಿತು. ಹೀಗೆ ಕಾರ್ಪೊರೇಟ್ ಪ್ರಪಂಚವು ಅಂತರಂಗದ ಆನಂದದ ಹೊನಲಿಗೆ ಸಾಕ್ಷಿಯಾಯಿತು. 'ಜನನೀ ಜನ್ಮಭೂಮಿಶ್ಚ ಸ್ವರ್ಗಾದಪಿ ಗರೀಯಸಿ' ಎನ್ನುವ ಮಾತಿನ ಮೂರ್ತರೂಪ ಅಲ್ಲಿ ಅರಳಿತ್ತು!

ನುಲಿಯ ಚಂದಯ್ಯ ಜಯಂತಿ ಅರ್ಥಪೂರ್ಣ ಆಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಶುಕ್ರವಾರ ಆಯೋಜಿಸಿದ್ದ ಶ್ರೀ ನುಲಿಯ ಚಂದಯ್ಯ ಜಯಂತಿ ಕಾರ್ಯಕ್ರಮವನ್ನು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಗಂಗಾಧರ ಸಂಬಣ್ಣಿ ಉದ್ಘಾಟಿಸಿದರು.

ಈ ವೇಳೆ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ ಅವರು ಮಾತನಾಡಿ, ಶರಣ ನುಲಿಯ ಚಂದಯ್ಯ ಅವರು ಕಾಯಕ, ದಾಸೋಹ ಹಾಗೂ ಸಮಾನತೆಯ ತತ್ವಗಳ ಸಾರಿ ಅದರಂತೆ ನಡೆದು ಸಮಾಜಕ್ಕೆ ಮಾದರಿಯಾಗಿದ್ದಾರೆ.ಅವರ ಆದರ್ಶ ಮತ್ತು ಸಂದೇಶ ಇಂದಿನ ಪೀಳಿಗೆ ಅರಿತುಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ನುಲಿಯ ಚಂದಯ್ಯ ಅವರು 12ನೇ ಶತಮಾನದಲ್ಲಿ ಕಾಯಕದ ಮೂಲಕ ಸಮಾಜಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಕಾಯಕಕ್ಕೆ ಘನತೆ ತಂದುಕೊಟ್ಟ ಶರಣರ ಜೀವನ ಮತ್ತು ವಿಚಾರಧಾರೆಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಿಯಾಗಿವೆ ಎಂದರು.

ವಿಶೇಷ ಉಪನ್ಯಾಸ ನೀಡಿದ, ಮೋಹನ ಕಟ್ಟಿಮನಿ ಅವರು ನುಲಿಯ ಚಂದಯ್ಯ ಅವರ ಜೀವನ, ಕಾಯಕನಿಷ್ಠೆ, ಶರಣ ತತ್ವಗಳ ಮೇಲಿನ ಬದ್ಧತೆ ಹಾಗೂ ಸಮಾಜಕ್ಕೆ ನೀಡಿದ ಕೊಡುಗೆಗಳ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕ ಅಶೋಕ ಕಲ್ಲಗಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಬ್ರಹ್ಮಶ್ರೀ ನಾರಾಯಣ ಗುರುಗಳ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬ್ರಹ್ಮಶ್ರೀ ನಾರಾಯಣ ಗುರುಗಳು ಸಮಾಜದಲ್ಲಿ ಸಮಾನತೆ, ಸಹೋದರತ್ವ ಹಾಗೂ ಸಾಮಾಜಿಕ ನ್ಯಾಯದ ಪರಿಕಲ್ಪನೆಗಳನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸಿದ ಮಹಾನ್ ಸಮಾಜ ಸುಧಾರಕರಾಗಿದ್ದು, ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಹೇಳಿದರು.

ಜಿಲ್ಲಾಡಳಿತದ ವತಿಯಿಂದ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಅಂಗವಾಗಿ ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದ

ವಿಜಯಪುರ ಜಿಲ್ಲಾಡಳಿತ ವತಿಯಿಂದ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಕರೆ

ಅವರು,ನಾರಾಯಣ ಗುರುಗಳು ಅಸಮಾನತೆ ಹಾಗೂ ಸಾಮಾಜಿಕ ಅನಿಷ್ಟಗಳ ವಿರುದ್ಧ ಹೋರಾಡಿ, ಶಿಕ್ಷಣ ಮತ್ತು ಸಾಮಾಜಿಕ ಜಾಗೃತಿಯ ಮೂಲಕ ಸಮಾಜದ ಅಭಿವೃದ್ಧಿಗೆ ದಾರಿ ತೋರಿದವರಾಗಿದ್ದಾರೆ. ಅವರ ಚಿಂತನೆಗಳು ಇಂದಿನ ಸಮಾಜಕ್ಕೂ ಪ್ರೇರಣೆಯಾಗಿವೆ ಎಂದು ಹೇಳಿದರು.

ಸಮಾಜದಲ್ಲಿ ಪ್ರತಿಯೊಬ್ಬರಿಗೂ ಸಮಾನ ಅವಕಾಶ ಹಾಗೂ ಗೌರವ ದೊರೆಯಬೇಕು ಎಂಬ ನಾರಾಯಣ ಗುರುಗಳ ಸಂದೇಶವನ್ನು ಮುಂದಿನ ಪೀಳಿಗೆಗೆ ತಲುಪಿಸುವ ಅಗತ್ಯವಿದೆ.ಅವರ ತತ್ವಾದರ್ಶಗಳನ್ನು ಅಥರ್ಮಾಡಿಕೊಂಡು, ಸಮಾನತೆ ಮತ್ತು ಸೌಹಾರ್ದತೆಯಿಂದ ಕೂಡಿದ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ್ ಭೋವಿ, ಯಲ್ಲಪ್ಪ ಈಳ್ಳಿಗೇರಿ, ಬಸವರಾಜ, ಪ್ರಭಾಕರ, ಹನುಮಂತ, ಹಾಜಪ್ಪ, ಶ್ರೀಶೈಲ, ರಾಜು, ರಂಗನಾಥ ಹಾಗೂ ಶೇಖಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಹಾಗೂ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಕ್ಕೆ ಸೆ.15 ವರೆಗೆ ಅವಕಾಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪ್ರಸಕ್ತ ಸಾಲಿನ (2026–27) ಸ್ನಾತಕೋತ್ತರ ಹಾಗೂ ವ್ಯಾಲ್ಯು ಆಡೆಡ್ ಡಿಪ್ಲೊಮಾ, ಅಡ್ವಾನ್ಸ್ಡ್ ಡಿಪ್ಲೊಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳ ಖಾಲಿ ಉಳಿದಿರುವ ಸೀಟುಗಳ ಭರ್ತಿಗಾಗಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಸೆ. 15, 2026ರವರೆಗೆ ವಿಸ್ತರಿಸಲಾಗಿದೆ.

ಕನ್ನಡ, ಇಂಗ್ಲಿಷ್, ಹಿಂದಿ, ಉರ್ದು, ಸಂಗೀತ, ಮಹಿಳಾ ಅಧ್ಯಯನ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ, ಪತ್ರಿಕೋದ್ಯಮ ಮತ್ತು ಸಮೂ